# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ –274 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ:24–05–2025 ಶನಿವಾರ | ಪುಟ: 4 | ಬೆಲೆ : ರೂ.2–00

Volume - 02 Issue - 274 | RNI No: KARKAN/2023/88462 | KA/SK/CTA-874/2024-2026 | Chitradurga | Date: 24-05-2025 Saturday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ಪರಿಶಿಷ್ಟ ಜಾತಿಗಳ ಒಳಮೀಸಲಾತಿ ಸಮೀಕ್ಷಾ ಅವಧಿ ವಿಸ್ತರಣೆ: ಜಿಲ್ಲಾಧಿಕಾರಿ 2

ಜನಾಕ್ರೋಶ ಕೇವಲ ರಾಜಕೀಯವಾಗಿಯೇ ಹೊರತು, ಜನರಲ್ಲಿ ಆಕ್ರೋಶ ಇಲ್ಲ: ಸಿಎಂ 3

ನಮ್ಮ ಮಕ್ಕಳಿಗಾಗಿ ಎರಡು ನೀತಿ ಕಥೆಗಳು....... 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಎಸ್‌ಎಸ್‌ಎಲ್‌ಸಿ: ಮರುಮೌಲ್ಯಮಾಪನ ರಾಜ್ಯಕ್ಕೆ ದ್ವಿತೀಯ ಸ್ಥಾನ

» **ಚಳ್ಳಕೆರೆ**



ನಗರದ ಚಿನ್ಮಯ ಪಬ್ಲಿಕ್ ಪ್ರೌಢಶಾಲೆಯ ವಿದ್ಯಾರ್ಥಿ ಡಿ.ಕವನ ಎಸ್‌ಎಸ್‌ಎಲ್‌ಸಿ ಪರೀಕ್ಷೆ–01ರಲ್ಲಿ ಕನ್ನಡ ವಿಭಾಗದಲ್ಲಿ 98 ಅಂಕಗಳನ್ನು ಗಳಿಸಿದ್ದು ಮರುಮೌಲ್ಯಮಾಪನ ಮಾಡಿಸಿದಾಗ ಇವರಿಗೆ ಎರಡುಅಂಕಗಳುದೊರೆತಿದ್ದು ಕನ್ನಡಲ್ಲಿ 100 ಅಂಕ ಪಡೆದಿರುತ್ತಾಳೆ. ಅಂತಿಮವಾಗಿ ಈ ವಿದ್ಯಾರ್ಥಿನಿ 625ಕ್ಕೆ 622 ಗಣಿಸಿದ್ದು ಈಗ 625ಕ್ಕೆ 624 ಅಂಕವನ್ನು ಗಳಿಸುವ ಮೂಲಕ ರಾಜ್ಯಕ್ಕೆ ದ್ವಿತೀಯ ಸ್ಥಾನ ಪಡೆದು ಶಾಲೆಗೆ ಕೀರ್ತಿ ತಂದಿದ್ದಾಳೆಂದು ಮುಖ್ಯೋಪಾಧ್ಯಾಯಿನಿ ತ್ರಿವೇಣಿ ತಿಳಿಸಿದ್ದಾರೆ. ಎರಡು ಹೆಚ್ಚುವರಿ ಅಂಕ ಪಡೆದು ಫಲಿತಾಂಶದಲ್ಲಿ ಪ್ರಗತಿ ಸಾಧಿಸಿದ ವಿದ್ಯಾರ್ಥಿನಿ ಡಿ.ಕವನಗೆ ಶಾಲೆಯ ಆಡಳಿತಮಂಡಳಿ ಅಧ್ಯಕ್ಷ ಬಿ.ಸಿ.ಸಂಜೀವಮೂರ್ತಿ, ಜಂಟಿಕಾರ್ಯದರ್ಶಿ ಜಿ.ಎಸ್.ರಶ್ಮಿಸತೀಶ್‌ಕುಮಾರ್, ಕಾರ್ಯದರ್ಶಿ ಜಿ.ಆರ್.ಶಕುಂತಲ, ಬೋಧಕ ವರ್ಗ ಅಭಿನಂದಿಸಿದೆ.

### ರಕ್ತದಾನಿಗಳಿಗೆ ಪುರಸ್ಕಾರ

» **ಚಿತ್ರದುರ್ಗ**

ಭಾರತೀಯ ರೆಡ್ ಕ್ರಾಸ್ ಸಂಸ್ಥೆ ಕರ್ನಾಟಕ ರಾಜ್ಯ ಶಾಖೆ ವತಿಯಿಂದ ಜೂನ್ 14ರಂದು ನಡೆಯುವ ವಿಶ್ವ ರಕ್ತದಾನಿಗಳ ದಿನಾಚರಣೆ ರಾಜ್ಯಮಟ್ಟದ ಕಾರ್ಯಕ್ರಮದಲ್ಲಿ ಕನಿಷ್ಟ 25ಕ್ಕೂ ಹೆಚ್ಚು ಬಾರಿ ರಕ್ತದಾನ ಮಾಡಿರುವ ದಾನಿಗಳಿಗೆ ಪುರಸ್ಕಾರ ನೀಡಿ ಗೌರವಿಸಲಾಗುವುದು. ಯಾವುದೇ ಪ್ರತಿಫಲವನ್ನು ಅಪೇಕ್ಷಿಸದೇ, ಇನ್ನೊಬ್ಬರ ಅಮೂಲ್ಯವಾದ ಜೀವ ಉಳಿಸಬೇಕೆಂಬ ಧ್ಯೆಯ ಇಟ್ಟುಕೊಂಡು, ಸ್ವಯಂಪ್ರೇರಿತರಾಗಿ ರಕ್ತದಾನ ಮಾಡುವ ರಕ್ತದಾನಿಗಳಿಗೆ ಗೌರವ ಮತ್ತು ಹೃತ್ಪೂರ್ವಕ ವಂದನೆ ಸಲ್ಲಿಸುವ ಮುಖ್ಯ ಉದ್ದೇಶದಿಂದ ಭಾರತೀಯ ರೆಡ್ ಕ್ರಾಸ್ ಸಂಸ್ಥೆ ಕರ್ನಾಟಕ ರಾಜ್ಯ ಶಾಖೆ ಬೆಂಗಳೂರು ಅವರು ಜೂನ್ 14ರಂದು ವಿಶ್ವ ರಕ್ತದಾನಿಗಳ ದಿನಾಚರಣೆ ದಿನದಂದು ರಕ್ತದಾನಿಗಳನ್ನು ಗೌರವಿಸುವ ಸಲುವಾಗಿ ಎಲ್ಲಾ ಜಿಲ್ಲೆಗಳಿಂದ ಒಬ್ಬ ರಕ್ತದಾನಿಯನ್ನು ಗೌರವಿಸಲಾಗುತ್ತದೆ. ಪ್ರಯುಕ್ತ ಚಿತ್ರದುರ್ಗ ಜಿಲ್ಲೆಯಿಂದ ಕನಿಷ್ಠ 25 ಬಾರಿ ಮೇಲ್ಪಟ್ಟು ರಕ್ತದಾನ ಮಾಡಿರುವ ಒಬ್ಬ ರಕ್ತದಾನಿಯನ್ನು ನಾವುಗಳು ರೆಡ್ ಕ್ರಾಸ್ ರಾಜ್ಯ ಶಾಖೆಗೆ ಕಳುಹಿಸ ಬೇಕಾಗಿರುತ್ತದೆ. ರಕ್ತದಾನಿ ಅಥವಾ ಅವರಿಗೆ ಸಂಬಂಧಿಸಿದವರು ರಕ್ತದಾನಕ್ಕೆ ಸಂಬಂಧಿಸಿದ ಪ್ರಮಾಣ ಪತ್ರಗಳ ದಾಖಲೆಯ ಪ್ರತಿಯೊಂದಿಗೆ ರಕ್ತದಾನಿಯ ವಿಳಾಸ ಹಾಗೂ ಮೊಬೈಲ್ ಸಂಖ್ಯೆಯ ವಿವರವನ್ನು ಇದೇ ಮೇ 27ರೊಳಗೆ ಕಾರ್ಯದರ್ಶಿ, ಭಾರತೀಯ ರೆಡ್ ಕ್ರಾಸ್ ಸಂಸ್ಥೆ, ಚಿತ್ರದುರ್ಗ, ಜಿಲ್ಲಾ ಶಾಖೆ ಕಚೇರಿ, ಸ್ವಾತಂತ್ರ್ಯ ಹೋರಾಟಗಾರರ ಭವನ, ಸ್ಟೇಡಿಯಂ ರಸ್ತೆ, ಚಿತ್ರದುರ್ಗ ಮೊಬೈಲ್–7899187128 ಸಂಪರ್ಕಿಸಬೇಕು ಎಂದು ಭಾರತೀಯ ರೆಡ್‌ಕ್ರಾಸ್ ಚಿತ್ರದುರ್ಗ ಜಿಲ್ಲಾ ಶಾಖೆ ಕಾರ್ಯದರ್ಶಿ ಎನ್. ಮಜಹರ್ ಉಲ್ಲಾ ತಿಳಿಸಿದ್ದಾರೆ.

### 25ರಂದು ವಿದ್ಯುತ್ ಇರಲ್ಲ

» **ಚಿತ್ರದುರ್ಗ**

ಬೆಸ್ಕಾಂ ಚಿತ್ರದುರ್ಗ ಗ್ರಾಮೀಣ ಉಪ ವಿಭಾಗ ವ್ಯಾಪ್ತಿಯಲ್ಲಿ ಬರುವ ತುರುವನೂರು ವಿದ್ಯುತ್ ವಿತರಣಾ ಕೇಂದ್ರದಲ್ಲಿ ತುರ್ತು ನಿರ್ವಹಣಾ ಕಾಮಗಾರಿ ಹಮ್ಮಿಕೊಂಡಿರುವುದರಿಂದ ಮೇ 25ರಂದು ಬೆಳಿಗ್ಗೆ 10 ರಿಂದ ಸಂಜೆ 5 ರವರೆಗೆ ತುರುವನೂರು ವಿದ್ಯುತ್ ವಿತರಣಾ ಕೇಂದ್ರದಿಂದ ವಿದ್ಯುತ್ ಸರಬರಾಜಾಗುವ ಎನ್.ಜೆ.ವೈ ಮತ್ತು ಐ.ಪಿ. ಮಾರ್ಗಗಳಿಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಲಿದೆ. ಐ.ಪಿ. ಮಾರ್ಗಗಳಿಗೆ ಸಮಯ 10 ರ ಒಳಗೆ ವಿದ್ಯುತ್ ಸರಬರಾಜು ಮಾಡಲಾಗುವುದು.

**ವಿದ್ಯುತ್ ಅಡಚಣೆ ಯಾಗುವ ಪ್ರದೇಶಗಳು:** 66/11 ಕೆವಿ ತುರುವನೂರು ವಿವಿ ಕೇಂದ್ರದಿಂದ ಸರಬರಾಜಾಗುವ 11ಕೆವಿ ಮಾರ್ಗಗಳಲ್ಲಿ ವಿದ್ಯುತ್ ಅಡಚಣೆಯಾಗುತ್ತದೆ. ಎಫ್–5 ತುರುವನೂರು ಎನ್.ಜೆ.ವೈ, ಮತ್ತು ಎಫ್–9 ಪೇಲೂರಹಟ್ಟಿ ಎನ್.ಜೆ.ವೈ ಮಾರ್ಗ. 66/11 ಕೆವಿ ತುರುವನೂರು ವ್ಯಾಪ್ತಿಯ ತುರುವನೂರು, ಕೂನಬೇವು, ಬೆಳಗಟ್ಟ, ಕಡಬನಕಟ್ಟೆ, ಪೇಲೂರಹಟ್ಟಿ, ಗೋನೂರು ಹಾಗೂ ಸುತ್ತಮುತ್ತಲಿನ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಗ್ರಾಹಕರು ಸಹಕರಿಸಬೇಕು ಎಂದು ಬೆಸ್ಕಾಂ ಗ್ರಾಮೀಣ ಉಪವಿಭಾಗದ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಕೋರಿದ್ದಾರೆ.

## ಮನೆ ಮನೆಯ ಬೆಳಕಾದ ಗೃಹಜ್ಯೋತಿ

# ಜಿಲ್ಲೆಯ 3.75 ಲಕ್ಷ ಗ್ರಾಹಕರಿಗೆ ಉಚಿತ ವಿದ್ಯುತ್

» **ಚಿತ್ರದುರ್ಗ**





ಬಯಲುಸೀಮೆ ಹಾಗೂ ಕೋಟೆಯ ನಾಡು ಎನಿಸಿರುವ ಚಿತ್ರದುರ್ಗ ಜಿಲ್ಲೆಯಲ್ಲಿ ರಾಜ್ಯ ಸರ್ಕಾರ ಜಾರಿ ಮಾಡಿದ ಗ್ಯಾರಂಟಿ ಯೋಜನೆಗಳಲ್ಲಿ ಒಂದಾಗಿರುವ ಗೃಹಜ್ಯೋತಿ ಯೋಜನೆ ಕತ್ತಲೆಯನ್ನು ದೂರ ಮಾಡಿದ್ದು, ಮನೆ ಮನೆಗೂ ಬೆಳಕು ಚೆಲ್ಲುವಂತೆ ಮಾಡಿದೆ.

ರಾಜ್ಯ ಸರ್ಕಾರದ ಇಂಧನ ಇಲಾಖೆ ಮೂಲಕ ಜಾರಿ ಮಾಡಲಾದ ಗೃಹಜ್ಯೋತಿ ಯೋಜನೆ ಚಿತ್ರದುರ್ಗ ಜಿಲ್ಲೆಯಲ್ಲಿ ಕೆಲವೇ ದಿನಗಳಲ್ಲಿ ಅತ್ಯಂತ ಜನಪ್ರಿಯವಾಗಿದ್ದು, ಕೇವಲ ಬಡವರ ಮನೆ ಬೆಳಗುವುದು ಮಾತ್ರವಲ್ಲ, ವಿದ್ಯುತ್ ಬಿಲ್ ಭಾರ ಹೋರುತ್ತಿದ್ದ ಮಧ್ಯಮ ವರ್ಗದ ಕುಟುಂಬಗಳು ಕೂಡ ಇದರ ಫಲಾನುಭವ ಪಡೆದು ಬಿಲ್ ಕಟ್ಟುವ ಶ್ರಮ, ಕತ್ತಲೆ ಛಾಯೆಯನ್ನೂ ದೂರ ಮಾಡಿಕೊಂಡಿದ್ದಾರೆ.

ಕರ್ನಾಟಕ ಸರ್ಕಾರದ ಗ್ಯಾರಂಟಿ ಯೋಜನೆಗಳಲ್ಲಿ ಒಂದಾದ ಗೃಹಜ್ಯೋತಿ ಯೋಜನೆಯು ಯಶಸ್ವಿಯಾಗಿ ಜಾರಿಗೊಂಡು ಎರಡು ವರ್ಷ ಪೂರ್ಣಗೊಳಿಸುವತ್ತ ಹೆಜ್ಜೆ ಹಾಕುತ್ತಿದೆ. ಜಿಲ್ಲೆಯಲ್ಲಿ ಗೃಹಜ್ಯೋತಿ ಯೋಜನೆಗೆ ಅಭೂತ ಪೂರ್ವ ಸ್ಪಂದನೆ ಸಿಕ್ಕಿದೆ. ಜಿಲ್ಲೆಯಾದ್ಯಂತ ಗೃಹಜ್ಯೋತಿ ಅತ್ಯಂತ ಜನಪ್ರಿಯ ಯೋಜನೆಯಾಗಿದ್ದು, ಬಹುತೇಕ ಫಲಾನುಭವಿಗಳು ನೋಂದಣಿ ಮಾಡಿಕೊಂಡು ಈ ಸೌಲಭ್ಯದ ಸದುಪಯೋಗ ಪಡೆದುಕೊಂಡಿದ್ದಾರೆ. ಡಾ.ಬಾಬಾ ಸಾಹೇಬ ಅಂಬೇಡ್ಕರ್ ಅವರು ರಚಿಸಿದ ಸಂವಿಧಾನದ ಆಶಯದಂತೆ ಗೃಹಜ್ಯೋತಿ ಯೋಜನೆ ಈ ಸಮಾಜದಲ್ಲಿನ ಕಟ್ಟ ಕಡೆಯ ಕುಟುಂಬಕ್ಕೂ ಇದರ ಸವಲತ್ತು ದೊರೆಯುತ್ತಿದೆ. ಇದು ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಯ ಸಾರ್ಥಕ ಶ್ರಮವೂ ಆಗಿದೆ.

**ಮನೆ–ಮನ ಬೆಳಗುತ್ತಿರುವ ಗೃಹ ಜ್ಯೋತಿ ಯೋಜನೆ:** ರಾಜ್ಯ ಸರ್ಕಾರವು ಚುನಾವಣೆಗೂ ಮುನ್ನ ಘೋಷಿಸಿದ್ದ ಐದು ಗ್ಯಾರಂಟಿಗಳ ಪೈಕಿ ಒಂದಾದ ಗೃಹಜ್ಯೋತಿ ಯೋಜನೆಯು ಜಾರಿಗೊಂಡು, ಇದೀಗ ರಾಜ್ಯಾದ್ಯಂತ ಜನರ ಮನೆ–ಮನಗಳನ್ನು ಬೆಳಗುವ ಮೂಲಕ ವಿದ್ಯುತ್ ಕ್ಷೇತ್ರದಲ್ಲಿ ಹೊಸ ಕ್ರಾಂತಿಯನ್ನು ಉಂಟುಮಾಡಿದೆ. ಸರ್ಕಾರ ಅಧಿಕಾರಕ್ಕೆ ಬಂದ ಬಳಿಕ ಗೃಹಜ್ಯೋತಿ ಯೋಜನೆಗೆ ನೋಂದಣಿ ಕಾರ್ಯಕ್ಕೆ 2023 ರ ಜೂನ್ 18ರಂದು ಅಧಿಕೃತವಾಗಿ ಚಾಲನೆ ಸಿಕ್ಕಿತ್ತು. ರಾಜ್ಯದಲ್ಲಿ ಗೃಹ ಜ್ಯೋತಿ ಯೋಜನೆಯಡಿ 200 ಯೂನಿಟ್‌ವರೆಗೆ ಉಚಿತ ವಿದ್ಯುತ್ ಪಡೆಯಬಹುದಾಗಿದ್ದು, ಗ್ರಾಹಕರಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ.

ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳಲ್ಲಿ ಪ್ರಮುಖ ಕಾರ್ಯಕ್ರಮದ ನೋಂದಣಿಗೆ ಸಾರ್ವಜನಿಕರಿಂದ ಉತ್ತಮ ಪ್ರತಿಕ್ರಿಯೆ ಸಿಕ್ಕಿದೆ. ಕರ್ನಾಟಕದಾದ್ಯಂತ ಕರ್ನಾಟಕ ಒನ್, ಗ್ರಾಮ ಒನ್ ಮತ್ತು ಬೆಂಗಳೂರುಒನ್‌ಕೇಂದ್ರಗಳಲ್ಲಿನೋಂದಣಿ ನಡೆಯುತ್ತಿದೆ. ಅಲ್ಲದೆ ಸಾರ್ವಜನಿಕರು ಯೋಜನೆಗೆ ನೋಂದಣಿ ಮಾಡಿಕೊಳ್ಳಲು ಆಯಾ ವಿದ್ಯುತ್ ಕಂಪನಿಗಳು ಕೂಡ ಅಂತರ್ಜಾಲದಲ್ಲಿ ಹೊಸ ಪೋರ್ಟಲ್ ತೆರೆದು, ಅನುಕೂಲ ಮಾಡಿಕೊಟ್ಟಿವೆ. ಇದರ ಜೊತೆಗೆ ಫಲಾನುಭವಿಗಳು ತಮ್ಮ ಮೊಬೈಲ್‌ನಲ್ಲಿಯೇ ನೋಂದಣಿ ಮಾಡಿಕೊಳ್ಳಲು ಅನುವಾಗುವಂತೆ ಸರಳೀಕರಣ ಮಾಡಲಾಗಿದೆ.

**ಗೃಹ ಜ್ಯೋತಿ ನೋಂದಣಿಗೆ ಬೇಕಿರುವ ದಾಖಲೆಗಳು:** ಗೃಹ ಜ್ಯೋತಿ ಯೋಜನೆಗೆ ನೋಂದಣಿ ಮಾಡಿಕೊಳ್ಳುವ ಪ್ರಕ್ರಿಯೆಯು ತುಂಬಾ ಸರಳವಾಗಿದ್ದು, ಸೇವಾಸಿಂಧು (https://sevasindhugs.karnataka.gov.in), ಪೋರ್ಟಲ್‌ನಲ್ಲಿ ಖಾತೆ ಸಂಖ್ಯೆ, ಆಧಾರ್ ಸಂಖ್ಯೆ ಹಾಗೂ ಮೊಬೈಲ್ ಸಂಖ್ಯೆಗಳನ್ನು ನಮೂದಿಸುವ ಮೂಲಕ ಸುಲಭವಾಗಿ ನೋಂದಣಿ ಮಾಡಿಕೊಳ್ಳಬಹುದು.



ನಮ್ಮ ಮನೆಗೆ ಉಚಿತವಾಗಿ ವಿದ್ಯುತ್ ನೀಡುವಂತಹ ಗೃಹಜ್ಯೋತಿ ಯೋಜನೆ ಜಾರಿಗೆ ಬಂದಾಗಿನಿಂದ, ನಿಜಕ್ಕೂ ನಮಗೆ ಖುಷಿಯಾಗಿದೆ. ನಮ್ಮ ಮನೆಯ ನಿರ್ವಹಣೆಯಲ್ಲಿ ಗೃಹಜ್ಯೋತಿ ಯೋಜನೆ ಪ್ರಮುಖ ಪಾತ್ರ ವಹಿಸಿದೆ ಎಂದೇ ಹೇಳಲು ಬಯಸುತ್ತೇನೆ. ಮನೆಯಲ್ಲಿ ಕಷ್ಟ ಇರಲಿ, ಏನೇ ಇರಲಿ, ಪ್ರತಿ ತಿಂಗಳು ನಾವು ಕರೆಂಟ್ ಬಿಲ್ಲು ಕಟ್ಟಲೇ ಬೇಕಿತ್ತು. ಇಲ್ಲದೇ ಹೋದರೆ, ಸಂಪರ್ಕ ಕಡಿತ ಜೊತೆಗೆ, ದಂಡವು ಬೀಳುತ್ತಿತ್ತು. ಮನೆಯಲ್ಲಿ ಓದುವ ಮಕ್ಕಳಿಗೆ ರಾತ್ರಿ ಹೊತ್ತು ಕರೆಂಟ್ ಬೇಕೇ ಬೇಕು. ಗೃಹಜ್ಯೋತಿ ಯೋಜನೆ ಜಾರಿಗೆ ಬಂದ ಬಳಿಕ, ನಮಗೆ ಸಾಕಷ್ಟು ಹಣ ಉಳಿತಾಯ ಆಗುತ್ತಿದ್ದು, ಇದೇ ಹಣವನ್ನು ಇಟ್ಟುಕೊಂಡು, ಮನೆಯ ನಿರ್ವಹಣೆಗೆ ಬೇಕಿರುವ ತರಕಾರಿ, ಹಾಲು, ಮೊಸರು ಖರೀದಿಸುತ್ತಿದ್ದೇವೆ. ಗೃಹಜ್ಯೋತಿ ಯೋಜನೆಯಲ್ಲಿ ಯಾವುದೇ ಬದಲಾವಣೆ ಮಾಡದೆ, ಇದೇ ರೀತಿ ಮುಂದುವರೆಸಿಕೊಂಡು ಹೋಗಬೇಕು ಎಂದು ಸರ್ಕಾರಕ್ಕೆ ಮನವಿ ಮಾಡಿಕೊಳ್ಳುತ್ತೇನೆ. ಯೋಜನೆಯನ್ನು ಜಾರಿಗೊಳಿಸಿದ ಇಂಧನ ಸಚಿವರಾದ ಶ್ರೀ ಕೆ.ಜೆ. ಜಾರ್ಜ್ ಅವರಿಗೆ ಧನ್ಯವಾದಗಳು.

» **ಬಿ.ನಾಗರತ್ನಮ್ಮ, ವಾಲ್ಮೀಕಿ ನಗರ ಚಳ್ಳಕೆರೆ.**



ಗೃಹಜ್ಯೋತಿ ಯೋಜನೆಯನ್ನು ಜಾರಿಗೊಳಿಸಿರುವ ಕರ್ನಾಟಕ ಸರ್ಕಾರ ನುಡಿದಂತೆ ನಡೆದಿದೆ. ನಮ್ಮಂತಹವರ ಹಿತ ಕಾಯುತ್ತಿದೆ. ಎಲ್ಲರಿಗೂ ಉಚಿತವಾಗಿ ಗರಿಷ್ಟ 200 ಯುನಿಟ್ ಕರೆಂಟ್ ಕೊಡುತ್ತಿರುವುದು, ಅಲ್ಲದೆ ಯಾವುದೇ ಲೋಡ್ ಶೆಡ್ಡಿಂಗ್ ಮಾಡದೆ, ನಿರಂತರವಾಗಿ ಕರೆಂಟ್ ಕೊಡಲಾಗುತ್ತಿದೆ. ಗೃಹಜ್ಯೋತಿ ಯೋಜನೆ ಜಾರಿಗೂ ಮೊದಲು, ಆರ್ಥಿಕ ತೊಂದರೆಯಿಂದ ನಾವು ವಿದ್ಯುತ್ ಬಿಲ್ ಕಟ್ಟುವುದು ತಡವಾದರೆ, ಅದಕ್ಕೆ ದಂಡವನ್ನೂ ಕೂಡ ಹಾಕುತ್ತಿದ್ದರು. ವಿದ್ಯುತ್ ಬಿಲ್ ಜೊತೆಗೆ ದಂಡದ ಹಣವನ್ನೂ ನಾವು ಕಟ್ಟಬೇಕಿತ್ತು. ಗೃಹಜ್ಯೋತಿ ಯೋಜನೆ ಜಾರಿಗೊಳಿಸಿದ್ದರಿಂದ, ನಮಗೆ ಸಾಕಷ್ಟು ಉಳಿತಾಯ ಆಗುತ್ತಿದೆ. ಈ ಉಳಿತಾಯದ ಹಣವನ್ನು ಮನೆಯ ಇತರೆ ಖರ್ಚು ವೆಚ್ಚಗಳಿಗೆ ಬಳಸುತ್ತಿದ್ದೇವೆ. ಉಚಿತವಾಗಿ ವಿದ್ಯುತ್ ಕೊಡುತ್ತಿದ್ದರೂ, ನಾವು ಹಿತ-ಮಿತವಾಗಿ ಬಳಸುತ್ತಿದ್ದು, ಪ್ರತಿ ತಿಂಗಳು ಶೂನ್ಯ ಮೊತ್ತದ ಬಿಲ್ ಬರುತ್ತಿದೆ. ಈಗ ತುಸು ನೆಮ್ಮದಿ ಬಂದಂತಾಗಿದೆ. ಜನಮುಖಿಯಾಗಿರುವಂತಹ ಈ ಗ್ಯಾರಂಟಿ ಯೋಜನೆಗಳನ್ನು ಮುಂದುವರೆಸಿಕೊಂಡು ಹೋಗಬೇಕು.

» **ಮುಜಿಮುಲ್ಲಾ ಬಿ.ಎಂ., ಭಾಗ್ಯಜ್ಯೋತಿ ನಗರ, ಮೊಳಕಾಲ್ಮೂರು**

ಬಾಡಿಗೆ ಮನೆಯಲ್ಲಿ ವಾಸಿಸುವವರು, ಒಂದು ವೇಳೆ ಮನೆಯನ್ನು ಬೇರೆ ಮನೆಗೆ ಸ್ಥಳಾಂತರಿಸಿದ್ದಲ್ಲಿ ಅಂತಹವರು. ಹಾಗೂ ಹೊಸದಾಗಿ ಮನೆ ಕಟ್ಟಿಸಿಕೊಂಡವರು ಕೂಡ ಗೃಹಜ್ಯೋತಿ ಯೋಜನೆಗೆ ನೊಂದಣಿ ಮಾಡಿಕೊಳ್ಳಲು ನಿಯಮವನ್ನು ಸರಳಗೊಳಿಸಲಾಗಿದೆ.

ಗೃಹಜ್ಯೋತಿ ಯೋಜನೆಗೆ ಜನರು ಅರ್ಜಿ ಸಲ್ಲಿಕೆ ಮಾಡುವಾಗ ತಾಂತ್ರಿಕ ಸಮಸ್ಯೆಗಳು ಎದುರಾದರೆ ಹೆಚ್ಚಿನ ಮಾಹಿತಿಗಾಗಿ ವಿದ್ಯುಚ್ಛಕ್ತಿ ಕಚೇರಿ ಅಥವಾ 24*7 ಸಹಾಯವಾಣಿ ಸಂಖ್ಯೆ 1912 ಗೆ ಕರೆ ಮಾಡಬಹುದಾಗಿದೆ.

**ಜಿಲ್ಲೆಯಲ್ಲಿ 3.75 ಲಕ್ಷ ಫಲಾನುಭವಿಗಳು:** ಗೃಹಜ್ಯೋತಿ ಯೋಜನೆಯು ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳಲ್ಲಿ ಒಂದಾಗಿದ್ದು, ಈ ಯೋಜನೆಯಡಿ ಚಿತ್ರದುರ್ಗ ಜಿಲ್ಲೆಯಲ್ಲಿ 4,19,7722 ಗೃಹಪಯೋಗಿ ಗ್ರಾಹಕರಿದ್ದು, ಅದರಲ್ಲಿ ಒಟ್ಟು 3,75,160 ಗ್ರಾಹಕರು ಗೃಹಜ್ಯೋತಿ ಯೋಜನೆಯಡಿ ಫಲಾನುಭವಿಗಳಾಗಿದ್ದಾರೆ. 3,75,160 ಗ್ರಾಹಕರ ವಿದ್ಯುತ್ ಬಳಕೆ ಸಹಾಯಧನ ಮೊತ್ತ 15. 13 ಕೋಟಿ ರೂ. ಗಳಷ್ಟು ಕಳೆದ ಏಪ್ರಿಲ್–2025ರ ಮಾಹೆಯಲ್ಲಿ ಸರ್ಕಾರದಿಂದ ಬಿಡುಗಡೆಯಾಗಿದ್ದು, ಈ ಯೋಜನೆ ಜಾರಿಯಾದಾಗಿನಿಂದ ಇಲ್ಲಿಯವರೆಗೂ 3,75,160 ಗ್ರಾಹಕರ ಸಹಾಯಧನ ಮೊತ್ತ ಒಟ್ಟು 292. 75 ಕೋಟಿ ರೂ. ಗಳಷ್ಟು ಸರ್ಕಾರದಿಂದ ಬಿಡುಗಡೆಯಾಗಿದೆ ಎಂದು ಬೆಸ್ಕಾಂ ಅಧಿಕಾರಿಗಳು ತಿಳಿಸಿದ್ದಾರೆ.

## ಪ್ರಮುಖ ಸುದ್ದಿ

# ಜಾತಿ ಗಣತಿ: ಮನೆಗೆ ಬಂದಾಗ ಛಲವಾದಿ ಎಂದು ನಮೂದಿಸಿ

» **ಚಿತ್ರದುರ್ಗ**



ಸುಪ್ರೀಂ ಕೋರ್ಟ್‌ನ ಆದೇಶದಂತೆ ಪರಿಶಿಷ್ಟ ಜಾತಿಗೆ ಒಳ ಮೀಸಲಾತಿ ನೀಡುವ ಸಂಬಂಧ ರಾಜ್ಯದಲ್ಲಿ ಜಾತಿ ಗಣತಿ ನಡೆಯುತ್ತಿದೆ.ಛಲವಾದಿ ಸಮುದಾಯದವರು ಜಾತಿ ಗಣತಿ ಸಮೀಕ್ಷೆ ನಡೆಸುವವರು ಮನೆಗೆ ಬಂದಾಗ "ಛಲವಾದಿ" ಎಂದು ನಮೂದಿಸಿ ಎಂದು ತಮ್ಮ ಸಮುದಾಯದವರಿಗೆ ನಗರಸಭೆಯ ಮಾಜಿಅಧ್ಯಕ್ಷರು,ಛಲವಾದಿಸಮುದಾಯದ ಮುಖಂಡರಾದ ನಿರಂಜನಮೂರ್ತಿ ಮನವಿ ಮಾಡಿದ್ದಾರೆ.

ಚಿತ್ರದುರ್ಗ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸುಪ್ರೀಂ ಕೋರ್ಟ್ ದತ್ತಾಂಶವಿಲ್ಲದೇ ಒಳ ಮೀಸಲಾತಿ ಜಾರಿ ಮಾಡಲು ಬರುವುದಿಲ್ಲ ಅಂತ ಹೇಳಿದೆ.ನಮ್ಮ ಸಮುದಾಯ ದತ್ತಾಂಶ ಸಿಕ್ಕರೆ.ಜಾತಿಯ ಸಂಖ್ಯೆಯ ಆಧಾರದ ಮೇಲೆ ಸರ್ಕಾರಿ ಸವಲತ್ತುಗಳನ್ನು ಪಡೆಯಬಹುದು ಎಂದು ತಿಳಿಸಿದ ಅವರು, ಜಾತಿಗಣತಿಯು ಹಳ್ಳಿಗಳಲ್ಲಿ ಚನ್ನಾಗಿ ನಡೆಯುತ್ತಿದ್ದು ನಗರ ಪ್ರದೇಶದಲ್ಲಿ ನಮ್ಮ ಸಮುದಾಯಕ್ಕೆಹಿನ್ನಡೆಯಾಗುತ್ತಿದೆ.ಕಾರಣ ನಮ್ಮ ಸಮುದಾಯದವರು ಛಲವಾದಿ ಸಮುದಾಯ ಎಂದು ಹೇಳಿಕೊಳ್ಳುವುದಕ್ಕೆ ಮುಜುಗರಪಡುತ್ತಿದ್ದಾರೆ.ಛಲವಾದಿ ಎಂದು ಹೇಳಿಕೊಳ್ಳಲು ಮುಜುಗರ ಆಗುವುದಾದರೆ ಒಂದು ವಾರಗಳ ಕಾಲ ಬೂತ್‌ಮಟ್ಟದಲ್ಲಿ ಜಾತಿಗಣತಿ ನಡೆಯುತ್ತದೆ ಬೂತ್‌ಗೆ ಹೋಗಿ ನಮೂದಿಸಿ ಎಂದು ತಿಳಿಸಿ ನಮ್ಮ ಸಮುದಾಯದವರು ಎಲ್ಲರೂ ಸಹ ಜಾತಿ ಗಣತಿಯಲ್ಲಿ ತಪ್ಪದೇ ಭಾಗವಹಿಸಿ. ಯಾರೂ ಸಹಾ ತಪ್ಪಬಾರದು ಎಂದಿದ್ದಾರೆ. ಜಾತಿಗಣತಿ ಮಾಡುವವರು ಕೆಲವೊಂದು ಬಡಾವಣೆಗಳಲ್ಲಿ ಸರಿಯಾದ ರೀತಿಯಲ್ಲಿ ಜಾತಿ ಗಣತಿಯನ್ನು ಮಾಡುತ್ತಿಲ್ಲ ಇದರಿಂದ ಆ ಸಮುದಾಯದವರಿಗೆ ಮುಂದೆ ತೊಂದರೆಯಾಗಲಿದೆ ಈ ಹಿನ್ನಲೆಯಲ್ಲಿ ಬಡಾವಣೆಯಲ್ಲಿ ಯಾವ ಮನೆಯನ್ನು ಸಹಾ ಬಿಡದೆ ಗಣತಿಯನ್ನು ಮಾಡಬೇಕಿದೆ ಯಾರೂ ಮನೆ ಗಣತಿ ಮಾಡದೇ ಬಿಟ್ಟು ಬಂದರೆ ಅಥವಾ ತಪ್ಪಾಗಿ ನಮೂದಿಸಿದರೆ ಅಥವಗ ವಿರುದ್ದ ಕಾನೂನು ಕ್ರಮವನ್ನು ಜಿಲ್ಲಾಧಿಕಾರಿಗಳು ತೆಗೆದುಕೊಳ್ಳಬೇಕಿದೆ ಎಂದು ಆಗ್ರಹಿಸಿದರು.

ನಿವೃತ್ತ ಸಹಾಯಕ ಕೃಷಿ ನಿರ್ದೇಶಕರಾದ ವೆಂಕಟೇಶ್ ಮಾತನಾಡಿ, ರಾಜ್ಯದಲ್ಲಿ ಈಗ ಪರಿಶಿಷ್ಟ ಜಾತಿಯ ಸರ್ವೆ ನಡೆಯುತ್ತಿದೆ ಇದರಲ್ಲಿ ನಮ್ಮ ಸಮುದಾಯದವರು ಸಕ್ರಿಯವಾಗಿ ಭಾಗವಹಿಸಬೇಕಿದೆ, ಇಲ್ಲಿ ನಮ್ಮ ಸಮುದಾಯದವರು ಭಾಗವಹಿಸಿದ್ದರೆ ಮುಂದೆ ಸರ್ಕಾರ ಜಾರಿ ಮಾಡುವ ವಿವಿಧ ರೀತಿಯ ಯೋಜನೆಗಳಿಗೆ ಇದು ಸಹಕಾರಿಯಾಗಲಿದೆ ಇಲ್ಲಿ ನಮ್ಮ ಸಮುದಾಯ ಎಷ್ಟಿದೆ ಎಂದು ಈ ದತ್ತಾಂಶದಿಂದ ತಿಳಿಯುತ್ತದೆ ಇದರ ಮೂಲಕ ನಾವುಗಳು ಸರ್ಕಾರ ಸೌಲಭ್ಯಗಳನ್ನು ಮುಂದಿನ ದಿನಮಾನದಲ್ಲಿ ಪಡೆಯಬಹುದಾಗಿದೆ ಆದ್ದರಿಂದ ತಪ್ಪದೆ ಈ ಜಾತಿ ಜನಗಣತಿಯಲ್ಲಿ ಪ್ರತಿಯೊಬ್ಬರು ಸಹಾ ಸಕ್ರಿಯವಾಗಿ ಭಾಗವಹಿಸುವಂತೆ ಮನವಿ ಮಾಡಿದರು.

## ಪರಮೇಶ್ವರ್ ಮೇಲೆ ಕೇಂದ್ರ ಸರ್ಕಾರ ಇಡಿ ದಾಳಿ ನಡೆಸಿ ಅವರನ್ನು ಕುಗ್ಗಿಸುವ ಪ್ರಯತ್ನ

» **ಚಿತ್ರದುರ್ಗ**

ರಾಜ್ಯದಲ್ಲಿ ನಮ್ಮ ಸಮುದಾಯದವರ ಮೇಲೆ ರಾಜಕೀಯ ಪ್ರೇರಿತವಾದ ಯಾವುದೇ ಧಾಳಿ ನಡೆದರು ಸಹಾ ಅದನ್ನು ಛಲವಾದಿ ಸಮುದಾಯ ಖಂಡಿಸುತ್ತದೆ ಎಂದು ನಗರಸಭೆಯ ಮಾಜಿ ಅಧ್ಯಕ್ಷರು, ಛಲವಾದಿ ಸಮುದಾಯದ ಮುಖಂಡರಾದ ನಿರಂಜನಮೂರ್ತಿ ತಿಳಿಸಿದ್ದಾರೆ.

ಚಿತ್ರದುರ್ಗ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಟಿಯಲ್ಲಿ ಮಾತನಾಡಿದ ಅವರು, ನಮ್ಮ ಸಮುದಾಯದ ನಾಯಕರಾದ ಡಾ.ಜಿ ಪರಮೇಶ್ವರ್‌ರವರ ಮೇಲೆ ಕೇಂದ್ರ ಸರ್ಕಾರ ಈಡಿ ದಾಳಿ ನಡೆಸಿ ಅವರನ್ನು ಕುಗ್ಗಿಸುವ ಪ್ರಯತ್ನ ಮಾಡುತ್ತಿದೆ. ಅವರಿಗೆ ಬೆಂಬಲವಾಗಿ ನಮ್ಮ ಸಮುದಾಯ ನಿಲ್ಲಬೇಕಾಗಿದೆ. ಹಾಗೆಯೇ ನಮ್ಮ ಸಮುದಾಯದ ಇನ್ನೊಬ್ಬ ನಾಯಕರಾದ ಛಲವಾದಿ ನಾರಾಯಣಸ್ವಾಮಿರವರ ಬೆಂಬಲಕ್ಕೂ ನಮ್ಮ ಸಮುದಾಯ ನಿಲ್ಲಲಿದೆ ಎಂದರು. ರಾಜಕೀಯವಾಗಿ ಅವರು ಎಷ್ಟೇ ಬೇಕಾದರೂ ಮಾತಿನ ಚಕಮಕಿಯನ್ನು ನಡೆಸಲಿ ಆದರೆ ಈ ರೀತಿಯಾದ ಧಾಳಿಯನ್ನು ನಡೆಸುವುದರ ಮೂಲಕ ಅವರ ಆತ್ಮ ಬಲವನ್ನು ಕುಗ್ಗಿಸುವ ಕಾರ್ಯವನ್ನು ಮಾಡಲು ಸರ್ಕಾರ ಮುಂದಾಗಿದೆ ಇದು ಸರಿಯಲ್ಲ, ಇದ್ದಲ್ಲದೆ ಛಲವಾದಿಯವರ ಮೇಲೆ ನಡೆದಿರುವ ಧಾಳಿಯನ್ನು ಸಹಾ ಛಲವಾದಿ ಸಮುದಾಯ ಖಂಡಿಸುತ್ತದೆ. ನಮ್ಮ ಸಮುದಾಯದ ಮುಖಂಡರ ಪರವಾಗಿ ನಮ್ಮ ಸಮುದಾಯ ನಿಲ್ಲುತ್ತದೆ ಅವರಿಗೆ ಏನಾದರೂ ಅನ್ಯಾಯವಾದರೆ ಹೋರಾಟವನ್ನು ಮಾಡಲಾಗುವುದೆಂದು ನಿರಂಜನ ಮೂರ್ತಿ ತಿಳಿಸಿದರು.

## ಫಾಸ್ಟ್ ನ್ಯೂಸ್

### ನಗರಸಭೆಯಿಂದ ಪ್ಲಾಸ್ಟಿಕ್ ವಸ್ತುಗಳ ಮಾರಾಟದ ವಿರುದ್ದ ಸಮರ: ಅಂಗಡಿ ಮಾಲೀಕರಿಗೆ ಎಚ್ಚರಿಕೆ



» ಚಳ್ಳಕೆರೆ

ನಗರಸಭೆವತಿಯಿಂದ ಪ್ಲಾಸ್ಟಿಕ್‌ಕವರ್ ಸೇರಿದಂತೆ ಇನ್ನಿತರ ವಸ್ತುಗಳ ಬಳಕೆ ಬಗ್ಗೆ ಹಿರಿಯ ಅಧಿಕಾರಿಗಳ ಸೂಚನೆ ಮೇರೆಗೆ ನಿರಂತರ ತಪಾಸಣೆ ನಡೆಯುತ್ತಿದ್ದರೂ ಪ್ಲಾಸ್ಟಿಕ್ ಕವರ್ ಬಳಕೆಯನ್ನು ನಿಯಂತ್ರಣವಾಗಿಲ್ಲವೆಂಬ ಅಭಿಪ್ರಾಯ ಸಾರ್ವಜನಿಕರದ್ದಾಗಿದೆ. ಜಿಲ್ಲಾಧಿಕಾರಿಗಳಮತ್ತು ಜಿಲ್ಲಾ ಯೋಜನಾಧಿಕಾರಿಗಳ ನಿರ್ದೇಶಕ ಮೇರೆಗೆ ಪೌರಾಯುಕ್ತ ಜಗರೆಡ್ಡಿ ಮಾರ್ಗದರ್ಶನದಲ್ಲಿ ನಗರಸಭೆಯ ಪರಿಸರ ಇಂಜಿನಿಯರ್ ನರೇಂದ್ರಬಾಬು, ಹಿರಿಯ ಆರೋಗ್ಯ ನಿರೀಕ್ಷಕ ಗಣೇಶ್, ಮಹಲಿಂಗಪ್ಪ, ರುದ್ರಮುನಿ ಮುಂತಾದವರು ನಗರದ ಬೆಂಗಳೂರು, ಮಹದೇವಿ ಮತ್ತು ಕೆಎಸ್‌ಆರ್‌ಟಿಸಿ ಬಸ್ಟಾಂಡ್ ಸುತ್ತಮುತ್ತಲ ಅಂಗಡಿಗಳಲ್ಲಿ ದಿಢೀರ್ ದಾಳಿ ನಡೆಸಿ ಪ್ಲಾಸ್ಟಿಕ್ ಕವರ್‌ಗಳನ್ನು ವಶಪಡಿಸಿಕೊಂಡು ಅಂಗಡಿ ಮಾಲೀಕರಿಗೆ ಎಚ್ಚರಿಕೆ ನೀಡಿದ್ದಾರೆ.

### ವ್ಯಕ್ತಿ ಕಾಣೆ: ಪತ್ತೆಗೆ ಮನವಿ

» ದಾವಣಗೆರೆ

ನಗರದ ವಿದ್ಯಾನಗರ ನಿವಾಸಿ ನಾಗರಾಜ್ ತಂದೆ ಗುಡ್ಡಪ್ಪ (ಸು.28 ವರ್ಷ) ವ್ಯಕ್ತಿ ಕಾಣೆಯಾದ ಕುರಿತು ವಿದ್ಯಾನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಕಾಣೆಯಾದ ನಾಗರಾಜ್ ಸು.174 ಅಡಿ ಎತ್ತರ, ಗೋಧಿ ಮೈಬಣ್ಣ, ತೆಳ್ಳನೆಯ ಮೈಕಟ್ಟು ಹೊಂದಿದ್ದು, ಪುಟ್ಟಮ್ಮ ಮತ್ತು ಲಕ್ಷ್ಮಮ್ಮ ಎಂಬ ಅಚ್ಚೆ ಗುರುತುಗಳಿವೆ. ಕನ್ನಡ ಭಾಷೆ ಮಾತನಾಡುವರು. ಮನೆಯಿಂದ ಹೋಗುವಾಗ ನೀಲಿ ಮಿಶ್ರಿತ ಟೀ-ಶರ್ಟ್, ಹಸಿರು ಕಲರ್ ನೈಟ್ ಪ್ಯಾಂಟ್ ಧರಿಸಿರುತ್ತಾರೆ. ಈ ಮೇಲ್ಕಂಡ ವ್ಯಕ್ತಿಯ ಕುರಿತು ಮಾಹಿತಿ ಕಂಡುಬಂದಲ್ಲಿ ಠಾಣೆಯ ದೂರವಾಣಿ ಸಂಖ್ಯೆ 08192-262688, ಠಾಣೆಯ ಇನ್ಸ್‌ಪೆಕ್ಟರ್ ದೂರವಾಣಿ ಸಂಖ್ಯೆ : 9480803251 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

### ಎರಡು ದಿನಗಳ ಜೇನು ಕೃಷಿಯ ತಾಂತ್ರಿಕ ಕಾರ್ಯಾಗಾರ

» ಚಿತ್ರದುರ್ಗ

ಹಿರಿಯೂರು ತಾಲ್ಲೂಕಿನ ಬಬ್ಬೂರು ಫಾರಂನ ಜಿಲ್ಲಾ ಕೃಷಿ ತರಬೇತಿ ಕೇಂದ್ರದಲ್ಲಿ ಇದೇ ಮೇ.26 ಮತ್ತು 27ರಂದು ಬೆಳಿಗ್ಗೆ 10ಕ್ಕೆ ಜಿಲ್ಲೆಯ ರೈತರಿಗೆ ಜೇನು ಕೃಷಿಯ ಕುರಿತು ಎರಡು ದಿನದ ತರಬೇತಿ ಕಾರ್ಯಾಗಾರ ಹಮ್ಮಿಕೊಳ್ಳಲಾಗಿದೆ. ತರಬೇತಿ ಕಾರ್ಯಕ್ರಮದಲ್ಲಿ ಜೇನು ಕೃಷಿ ತಜ್ಞರು ಹಾಗೂ ನಿವೃತ್ತ ಸಹಾಯಕ ನಿರ್ದೇಶಕ ಮೇಟಿಕುರ್ಕಿಯ ಡಾ.ಶಾಂತವೀರಯ್ಯ ಅವರು ಜೇನು ಸಾಕಾಣಿಕೆಯ ಸಮಗ್ರ ಮಾಹಿತಿ ಬಗ್ಗೆ ವಿಷಯ ಮಂಡನೆ ಹಾಗೂ ಪ್ರಾತ್ಯಕ್ಷಿಕೆ ನೀಡುವರು. ಆಸಕ್ತ 40 ಜನ ರೈತಭಾಂದವರು ತರಬೇತಿಯಲ್ಲಿ ಭಾಗವಹಿಸಲು 8277931058 ದೂರವಾಣಿ ಸಂಖ್ಯೆಗೆ ಕರೆ ಮಾಡಿ ನೋಂದಾಯಿಸಿ ತರಬೇತಿಯ ಸದುಪಯೋಗ ಪಡೆದುಕೊಳ್ಳಬೇಕು. ಮೊದಲು ನೋಂದಾವಣೆ ಮಾಡಿಕೊಂಡ 40 ರೈತಭಾಂದವರು ಫ್ರೂಟ್ಸ್ ಐಡಿ (ಎಫ್‌ಐಡಿ) ಅಥವಾ ಆಧಾರ್ ಕಾರ್ಡ್‌ನೊಂದಿಗೆ ತರಬೇತಿಗೆ ಹಾಜರಾಗಬೇಕು ಎಂದು ಬಬ್ಬೂರು ಫಾರಂನ ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಸಹಾಯಕ ಕೃಷಿ ನಿರ್ದೇಶಕ ಆರ್.ರಜನೀಕಾಂತ ಕೋರಿದ್ದಾರೆ.

### ಎಸ್‌ಎಸ್‌ಎಲ್‌ಸಿ ಪರೀಕ್ಷೆ-2: ನಿಷೇಧಾಜ್ಞೆ ಜಾರಿ

» ಚಿತ್ರದುರ್ಗ

ಮೇ26ರಿಂದಜೂನ್02ರವರಗೆಎಸ್‌ಎಸ್‌ಎಲ್‌ಸಿ ಪರೀಕ್ಷೆ-2 ನಡೆಯಲಿರುವ ಕೇಂದ್ರಗಳ ಸುತ್ತ ನಿಷೇಧಾಜ್ಞೆ ಜಾರಿಗೊಳಿಸಿ ಜಿಲ್ಲಾಧಿಕಾರಿ ಟಿ. ವೆಂಕಟೇಶ್ ಆದೇಶಿಸಿದ್ದಾರೆ. ಜಿಲ್ಲಾದ್ಯಂತ 28 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ನಡೆಯುತ್ತಿದ್ದು, ಪರೀಕ್ಷೆ ನಡೆಯುವ ದಿನಾಂಕಗಳಂದು ಪರೀಕ್ಷಾ ಕೇಂದ್ರದ ಸುತ್ತಲೂ 200 ಮೀಟರ್ ಪ್ರದೇಶದಲ್ಲಿ ಕಲಂ 144 ಸೆಕ್ಷನ್ ಜಾರಿ ಮಾಡಿ ನಿಷೇದಾಜ್ಞೆ ಜಾರಿಗೊಳಿಸಲಾಗಿದೆ. ಪರೀಕ್ಷೆ ನಡೆಯುವ ಎಲ್ಲಾ ಕೇಂದ್ರಗಳ ವ್ಯಾಪ್ತಿಯಲ್ಲಿನ ಜೆರಾಕ್ಸ್ ಅಂಗಡಿ, ಕಂಪ್ಯೂಟರ್ ಇಂಟರ್‌ನೆಟ್ ಕೇಂದ್ರಗಳನ್ನು ಬೆಳಿಗ್ಗೆ 9 ರಿಂದ ಮಧ್ಯಾಹ್ನ 2 ಗಂಟೆಯವರೆಗೆ ತೆರೆಯುವಂತಿಲ್ಲ. ಪರೀಕ್ಷಾ ಕೇಂದ್ರಗಳಿಗೆ ಮೊಬೈಲ್ ಅಥವಾ ಇನ್ನಿತರೆ ಎಲೆಕ್ಟ್ರಾನಿಕ್ ಉಪಕರಣಗಳನ್ನು ತರಲು ಅವಕಾಶವಿಲ್ಲ ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಆದೇಶ ಹೊರಡಿಸಿದ್ದಾರೆ.

# ಪರಿಶಿಷ್ಟ ಜಾತಿಗಳ ಒಳಮೀಸಲಾತಿ ಸಮೀಕ್ಷಾ ಅವಧಿ ವಿಸ್ತರಣೆ: ಜಿಲ್ಲಾಧಿಕಾರಿ ಗಂಗಾಧರಸ್ವಾಮಿ

» ದಾವಣಗೆರೆ

ಹೆಚ್ಚು ಮಳೆ ಹಾಗೂ ಬೇರೆ ಕಾರಣಗಳಿಂದ ಪರಿಶಿಷ್ಟ ಜಾತಿ ಕುಟುಂಬಗಳ ಒಳ ಮೀಸಲಾತಿ ಸಮೀಕ್ಷೆಯ ದಿನಾಂಕವನ್ನು ವಿಸ್ತರಿಸಲಾಗಿದೆ ಎಂದು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ ತಿಳಿಸಿದರು.

ಶುಕ್ರವಾರ(ಮೇ.23) ರಂದು ಜಿಲ್ಲಾದಿಕಾರಿಗಳ ಕಚೇರಿಯಲ್ಲಿ ಪರಿಶಿಷ್ಟ ಜಾತಿ ಸಮಗ್ರ ಸಮೀಕ್ಷೆ ಕುರಿತು ಆಯೋಜಿಸಲಾಗಿದ್ದ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದರು. ಈಗಾಗಲೇ ಸಮೀಕ್ಷೆ ನಡೆಯುತ್ತಿದ್ದು ಮೇ 25 ರ ಸಂಜೆ 6 ಗಂಟೆಯವರೆಗೆ ನಡೆಯಲಿದೆ.

ವಿಶೇಷ ಶಿಬಿರಗಳು ಮೇ.26 ರಿಂದ 28 ರವರೆಗೆ ನಡೆಯಲಿದೆ. ಮತಗಟ್ಟೆ ಕೇಂದ್ರಗಳಲ್ಲಿ ಗಣತಿದಾರರು ಲಭ್ಯವಿರುತ್ತಾರೆ. ಯಾರನ್ನಾದರೂ ಬಿಟ್ಟು ಹೋಗಿದ್ದಲ್ಲಿ ವಿಶೇಷ ಶಿಬಿರದ ವೇಳೆ ಸೇರ್ಪಡೆ ಮಾಡಲು ಅವಕಾಶ ಕಲ್ಪಿಸಲಾಗಿದೆ.

2011ರ ಜನಗಣತಿಯ ಪ್ರಕಾರ 318305 ಪ.ಜಾತಿ ಜನಸಂಖ್ಯೆಯನ್ನು ಹೊಂದಿದ್ದು, ಪ್ರಸ್ತುತ ನಡೆಯುತ್ತಿರುವ ಗಣತಿಯ ಪ್ರಕಾರ ಸುಮಾರು 3,29,064 ಲಕ್ಷಕ್ಕೂ ಹೆಚ್ಚು ಪರಿಶಿಷ್ಟ ಜಾತಿಯ ಜನಗಣತಿ ಸಮೀಕ್ಷೆ ಮಾಡಿ ಶೇ 100 ಕ್ಕಿಂತ ಹೆಚ್ಚು ಸಾಧನೆ ಮಾಡಲಾಗಿದೆ. ಸಮೀಕ್ಷೆ ವೇಳೆ 85369



ಮನೆ ಭೇಟಿ ಗುರಿ ಇತ್ತು, ಈಗಾಗಲೇ 86366 ಮನೆಗಳ ಸಮೀಕ್ಷೆ ಮಾಡಲಾಗಿದೆ. ಸಮೀಕ್ಷೆಯಲ್ಲಿ ರಾಜ್ಯದಲ್ಲೇ ದಾವಣಗೆರೆ ಮೊದಲನೇ ಸ್ಥಾನದಲ್ಲಿದೆ ಎಂದರು.

ಸಾರ್ವಜನಿಕರು ಮೊಬೈಲ್ ಆಪ್ಲಿಕೇಶನ್ ಮೂಲಕವು ಕೂಡ ನೋಂದಾಣಿ ಮಾಡಿಸಬಹುದು. ಮೇ.5 ರಿಂದ ಆರಂಭವಾಗಿದ್ದು ಮೇ 25 ರವರೆಗೆ ಮನೆ-ಮನೆ ಭೇಟಿ ನೀಡಿ ಸಮೀಕ್ಷೆ ನಡೆಸಲಾಗುವುದು, ವಿಶೇಷ ಶಿಬಿರ (ಸಮೀಕ್ಷಾ ಬ್ಲಾಕ್ ವ್ಯಾಪ್ತಿಯಲ್ಲಿ) 3 ದಿನಗಳ ಕಾಲ ಮೇ.26 ರಿಂದ 28 ರವರೆಗೆ ಕೈಬಿಟ್ಟು ಹೋದಂತಹ ಪರಿಶಿಷ್ಟ ಜಾತಿಯ ಕುಟುಂಬದವರು ಶಿಬಿರಕ್ಕೆ ಆಗಮಿಸಿ ನೋಂದಾಯಿಸಿಕೊಳ್ಳಬಹುದು.

ಮೇ.19 ರಿಂದ 28 ರವರೆಗೆ ಸಮೀಕ್ಷೆಯಲ್ಲಿ ಆನ್‌ಲೈನ್ ವೆಬ್ ಸೈಟ http://schedulecastesurvey.karnataka.gov.in/selfdeclaration ಮೂಲಕ ಸ್ವಯಂ ಘೋಷಣೆಯನ್ನು ನಿಗದಿಪಡಿಸಲಾಗಿದೆ.

ಜಿಲ್ಲೆಯಲ್ಲಿ ಸಮೀಕ್ಷೆದಾರರು ಪ್ರತಿ ಮತಗಟ್ಟೆಗೆ ಒಬ್ಬರಂತೆ 1693 ಗಣತಿದಾರರು, ಪರಿಶಿಷ್ಟ ಜಾತಿ ಹೆಚ್ಚಿರುವ ಮತಗಟ್ಟೆಗಳಲ್ಲಿ ಹೆಚ್ಚುವರಿ 119 ಗಣತಿದಾರರನ್ನು ನೇಮಿಸಲಾಗಿರುತ್ತದೆ. ಪ್ರತಿ 10 ಸಮೀಕ್ಷಾದಾರರಿಗೆ ಒಬ್ಬರಂತೆ 169 ಮೇಲ್ವಿಚಾರಕರನ್ನು ಸೇರಿದಂತೆ ಒಟ್ಟು 1981 ಗಣತಿ ಕಾರ್ಯದಲ್ಲಿ ತೊಡಗಿದ್ದಾರೆ.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್.ಬಿ.ಇಟ್ನಾಳ್ ಮಾತನಾಡಿ ಜಿಲ್ಲೆಯಲ್ಲಿ 2 ಗ್ರಾಮಗಳಲ್ಲಿ ಮಾತ್ರ ಖಾಸಗಿ ಬೋರ್‌ವೆಲ್ ಕೊರೆಸಲಾಗಿದೆ. ಮಳೆಗಾಲ ಪ್ರಾರಂಭವಾಗಿರುವುದರಿಂದ ಜಿಲ್ಲೆಯಲ್ಲಿರುವ ಎಲ್ಲಾ ಪೈಪ್ ಲೈನ್ ಗಳನ್ನು ಅಳವಡಿಸಿ, ಕಲುಷಿತ ನೀರನ್ನು ಹೊರಹಾಕಲು ಕ್ರಮಕೈಗೊಳ್ಳಲಾಗಿದೆ. ಚರಂಡಿಯಲ್ಲಿರುವ ಗಲೀಜನ್ನು ಸ್ವಚ್ಚಗೊಳಿಸಲಾಗಿದೆ. 6 ತಾಲ್ಲೂಕುಗಳಲ್ಲಿ ಚರಂಡಿ ಸ್ವಚ್ಚಗೊಳಿಸಲಾಗಿದೆ. ಹರಿಹರದಲ್ಲಿರುವ ಬೆಂಕಿ ನಗರದಿಂದ ಗುತ್ತೂರುವರೆಗೂ ಚರಂಡಿಗಳನ್ನು ಸ್ವಚ್ಚಗೊಳಿಸಿಲಾಗಿದೆ. ಜಲಜೀವನ್ ನೀರಿನ ಗುಣಮಟ್ಟವನ್ನು ಪರಿಶೀಲಿಸಲಾಗಿದೆ. ಇದರಿಂದ ಜನರು ಹಳೆಯ ನೀರನ್ನು ಉಪಯೋಗಿಸದೇ ಪದೇ ಪದೇ ನೀರನ್ನು ಚರಂಡಿಗೆ ಬಿಟ್ಟು ಹೊಸ ಶುದ್ದವಾದ ನೀರನ್ನು ತುಂಬುತ್ತಾರೆ. ಇದರಿಂದ ಡೆಂಗ್ಯೂ ತಡೆಗಟ್ಟಬಹುದು. ಜಿಲ್ಲೆಯಲ್ಲಿ 113 ಕಿ.ಮೀ ಸಸಿ ನಡೆಸುವ ಕಾರ್ಯಕ್ರಮವನ್ನು ಆಯೋಜಿಸಲಾಗಿದ್ದು, ಪ್ರತಿ 1 ಕಿ.ಮೀಗೆ 300 ಗಿಡದಂತೆ 42000 ಗಿಡ ನಡೆಲಾಗುವುದು ಎಂದರು.

ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರಾದ ನಾಗರಾಜ.ಕೆ, ಡಿಡಿಪಿಯು ಕರಿಸಿದ್ದಪ್ಪ ಉಪಸ್ಥಿತರಿದ್ದರು.

### ಸರ್ಕಾರಿ ಹೆಚ್‌ಪಿಪಿಸಿ ಕಾಲೇಜು ವಾಣಿಜ್ಯಶಾಸ್ತ್ರವಿಭಾಗದ ವಿದ್ಯಾರ್ಥಿಗಳಿಂದ ಸ್ವಾದ ಆಹಾರ ತಯಾರಿಕೆ ಮತ್ತು ಮಾರಾಟ ಪ್ರದರ್ಶನ

## ವಿದ್ಯಾರ್ಥಿಗಳ ಜ್ಞಾನ ವೃದ್ದಿಗೆ ಸಹಕಾರಿ

» ಚಳ್ಳಕೆರೆ

ವಿದ್ಯಾರ್ಥಿಗಳ ಜ್ಞಾನವನ್ನು ವೃದ್ದಿಸಲು ಹಾಗೂ ವ್ಯಾಪಾರ, ವಹಿವಾಟಿನ ಬಗ್ಗೆ ಜ್ಞಾನ ಹೆಚ್ಚಿಸುವ ದೃಷ್ಠಿಯಿಂದ ಸ್ನಾತಕೋತ್ತರ ವಾಣಿಜ್ಯಶಾಸ್ತ್ರ ವಿಭಾಗ ವಿದ್ಯಾರ್ಥಿಗಳಿಂದ ಸ್ವಾದ ಆಹಾರ ತಯಾರಿಕೆ ಮತ್ತು ಮಾರಾಟ, ಪ್ರದರ್ಶನ ನಡೆಸಲಾಯಿತು ಎಂದು ಎಚ್‌ಪಿಪಿಸಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಪ್ರಾಂಶುಪಾಲ ಪ್ರೊ.ಬಿ.ಎಸ್.ಮಂಜುನಾಥ ತಿಳಿಸಿದರು.

ಕಾಲೇಜು ಆವರಣದಲ್ಲಿ ಸ್ನಾತಕೋತ್ತರ ವಾಣಿಜ್ಯಶಾಸ್ತ್ರ ವಿಭಾಗ ಹಮ್ಮಿಕೊಂಡಿದ್ದ ಆಹಾರ ಮೇಳವನ್ನು ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಸ್ನಾತಕೋತ್ತರ ವಾಣಿಜ್ಯಶಾಸ್ತ್ರ ವಿಭಾಗದ ವಿದ್ಯಾರ್ಥಿಗಳು ಆಹಾರ ಉತ್ಪಾದನೆಯ ಜೊತೆಗೆ ಮಾರಾಟದ ಬಗ್ಗೆಯೂ ಸಹ ಹೆಚ್ಚು ಅಭ್ಯಾಸ ಮಾಡಬೇಕಾಗುತ್ತಿದೆ. ಮಾರುಕಟ್ಟೆಯಲ್ಲಿ ತಾವು ತಯಾರಿಸಿದ ವಸ್ತುಗಳಿಗೆ ಬೆಲೆಯ ಜೊತೆಗೆ ಮೌಲ್ಯವೂ ದೊರೆತಲ್ಲಿ ಹೆಚ್ಚಿನ ಅನುಕೂಲವಾಗಲಿದೆ. ಈ ನಿಟ್ಟಿನಲ್ಲಿ ಉತ್ತಮ ಚಿಂತನೆ ನಡೆಯಲಿ ಎಂದರು.

ಸ್ನಾತಕೋತ್ತರ ವಾಣಿಜ್ಯಶಾಸ್ತ್ರ ವಿಭಾಗದ ಉಪನ್ಯಾಸಕಮಹಮ್ಮದ್‌ವಲಿವುಲ್ಲಾಮಾತನಾಡಿ,




ವಾಣಿಜ್ಯಶಾಸ್ತ್ರ ವಿದ್ಯಾರ್ಥಿಗಳು ಸ್ವಾದ ಆಹಾರ ತಯಾರಿಕೆ ಕುರಿತು ಅವರೇ ಹಲವಾರು ಆಹಾರ ಪದಾರ್ಥಗಳನ್ನು ಸಿದ್ದಪಡಿಸುವ ಮೂಲಕ ಕಾರ್ಯಕ್ರಮದ ಮಹತ್ವವನ್ನು ಹೆಚ್ಚಿಸಿದ್ದಾರೆ. ರಾಗಿಮುದ್ದೆ, ಸಾಂಬರ್, ಮಸಾಲೆದೋಸೆ, ಪುಳಿಯೋಗರೆ, ಮಸಾಲೆಅನ್ನ, ಗೋಬಿ, ಫ್ರೈಡ್‌ರೈಸ್, ಹಣ್ಣಿ ಜ್ಯೂಸ್, ಹಣ್ಣುನಿಂದ ತಯಾರಿಸಿದ ಆಹಾರ ಪದಾರ್ಥಗಳನ್ನು ಸಿದ್ದಪಡಿಸಿದ್ಧಾರೆ. ಎಲ್ಲವೂ ಸ್ವಾದಕರವಾಗಿವೆ ಅವುಗಳನ್ನು ಸ್ನಾತಕ ವಿದ್ಯಾರ್ಥಿಗಳು ಕೊಂಡು ಅದರ ರುಚಿಯನ್ನು ಸವಿದು ಸಂತಸ ಪಟ್ಟಿದ್ದಾರೆ ಎಂದರು.

ಪ್ರಾಧ್ಯಾಪಕ ಪ್ರೊ.ರಾಜಕುಮಾರ್, ಉಪನ್ಯಾಸಕ ಯರ್ರಿಸ್ವಾಮಿ, ಸಿ.ಎಂ.ತಿಪ್ಪೇಸ್ವಾಮಿ, ರಣಜಿತ್‌ಕುಮಾರ್, ಅಶ್ವಿನಿದೇಸಾಯಿ, ಪಿ.ಕೆ.ಸಂತೋಷ್, ಮಧು, ಬಸವರಾಜು, ಸಂತೋಷ್‌ಕುಮಾರ್, ಪ್ರೇಮಾ, ಮಾರುತಿ ಮುಂತಾದವರು ಉಪಸ್ಥಿತರಿದ್ದರು.

### ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯ ಪ್ರವೇಶಕ್ಕೆ ಅರ್ಜಿ ಆಹ್ವಾನ

**ಚಿತ್ರದುರ್ಗ:** ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಚಿತ್ರದುರ್ಗ ತಾಲ್ಲೂಕಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಮೆಟ್ರಿಕ್ ನಂತರದ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿ ನಿಲಯಗಳಲ್ಲಿ ಪ್ರವೇಶಕ್ಕಾಗಿ ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ-1, 2ಎ, 2ಬಿ, 3ಎ, 3ಬಿ, ಪ.ಜಾತಿ ಮತ್ತು ಪ.ವರ್ಗದ ಪಿಯುಸಿ, ಐಟಿಐ ಮತ್ತು ಡಿಪ್ಲೋಮೋ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಂದ 2025-26ನೇ ಸಾಲಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಜೂನ್ 20 ಅರ್ಜಿ ಸಲ್ಲಿಸಲು ಕೊನೆಯ ದಿನ. ವಿದ್ಯಾರ್ಥಿಗಳು https://shp.karnataka.gov.in/bcwd ಅನ್ನು ಸಂಪರ್ಕಿಸಿ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬೇಕು. ತಾಲ್ಲೂಕುವಾರು ವಿದ್ಯಾರ್ಥಿ ನಿಲಯಗಳ ವಿವರ ಹಾಗೂ ವಿದ್ಯಾರ್ಥಿ ನಿಲಯದ ಪ್ರವೇಶಕ್ಕೆ ಇರಬೇಕಾದ ಅರ್ಹತೆ, ಸಲ್ಲಿಸಬೇಕಾದದ ದಾಖಲೆಗಳ ವಿವರ ಮತ್ತು ಸರ್ಕಾರದ ಆದೇಶಕ್ಕಾಗಿ ಇಲಾಖೆಯ ವೆಬ್‌ಸೈಟ್ https://bcwd.karnataka.gov.in/ ಅನ್ನು ನೋಡಬಹುದು.

### ಬೀಜ ಗೊಬ್ಬರ ಕೃತಕ ಅಭಾವ ಸೃಷ್ಟಿಸಿದಲ್ಲಿ ಕಠಿಣ ಕ್ರಮ: ಡಿಸಿ



» ದಾವಣಗೆರೆ

ಮುಂಗಾರು ಮಳೆ ಉತ್ತಮ ಆರಂಭವಾಗಿದ್ದು, ರೈತರು ಬಿತ್ತನೆ ಕಾರ್ಯ ಚುರುಕುಗೊಳಿಸಿದ್ದಾರೆ. ಆದ್ದರಿಂದ ವರ್ತಕರು ರೈತರಿಗೆ ಬೇಕಾದ ಬಿತ್ತನೆ ಬೀಜ ಹಾಗೂ ರಸಗೊಬ್ಬರ ಸಾಕಷ್ಟು ದಾಸ್ತಾನಿದೆ. ಆದರೂ ಕೃತಕ ಅಭಾವ ಸೃಷ್ಟಿಸಿ, ಕಾಳ ಸಂತೆಯಲ್ಲಿ ಮಾರಾಟ ಮಾಡುವುದು ಕಂಡುಬಂದಲ್ಲಿ ಅಂತಹವರ ವಿರುದ್ಧ ನಿರ್ದಾಕ್ಷಿಣ್ಯವಾಗಿ ಕಠಿಣ ಕ್ರಮಕೈಗೊಳ್ಳಲಾಗುವುದು ಎಂದು ಜಿಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ಕಟ್ಟುನಿಟ್ಟಿನ ಸೂಚನೆ ನೀಡಿದರು. ರೈತರು ಡಿಎಪಿ ಗೊಬ್ಬರದ ಬದಲಾಗಿ ಗಂಧಕಯುಕ್ತ ಗೊಬ್ಬರ ಬಳಸಿದರೆ ಉತ್ತಮ ಇಳುವರಿ ಕಾಣಬಹುದು. ರೈತರು ಸಹ ಉತ್ತಮ ಗುಣಮಟ್ಟದ ಬೀಜಗಳನ್ನು ರೈತ ಸಂಪರ್ಕ ಕೇಂದ್ರಗಳಲ್ಲಿಯೇ ಖರೀದಿಸಬೇಕು. ಉತ್ಪನ್ನಗಳನ್ನು ಖರೀದಿಸಿದ ರಶೀದಿಗಳನ್ನು ಬೆಳೆ ಕಟಾವು ಮಾಡುವವರೆಗೂ ಜಾಗೃತವಾಗಿ ಇಟ್ಟುಕೊಂಡಿರಬೇಕು. ಬೀಜ ಗೊಬ್ಬರಗಳಲ್ಲಿ ಲೋಪದೋಷಗಳು ಕಂಡುಬಂದಲ್ಲಿ ಸಂಬಂದಪಟ್ಟವರ ಮೇಲೆ ಕ್ರಮಕೈಗೊಂಡು ಸೂಕ್ತ ಪರಿಹಾರ ಕಂಡುಕೊಳ್ಳಲಾಗುವುದು ಎಂದರು.

**ಜೂನ್ 5 ರಿಂದ ಜಿಲ್ಲಾಧಿಕಾರಿಗಳ ಕಚೇರಿ ಇನ್ನೂ ಪ್ಲಾಸ್ಟಿಕ್ ಮುಕ್ತ :** ಮುಂಬರುವ ಜೂನ್ 5 ರಂದು ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಪ್ಲಾಸ್ಟಿಕ್ ಬಳಕೆ ಸಂಪೂರ್ಣ ನಿಷೇಧಿಸಿ ಪ್ಲಾಸ್ಟಿಕ್ ಮುಕ್ತ ಕಚೇರಿ ಎಂದು ಘೋಷಿಸಲಾಗುವುದು. ಜಿಲ್ಲೆಯ ವ್ಯಾಪ್ತಿಯಲ್ಲಿನ ಶಾಲಾ ಕಾಲೇಜು ವ್ಯಾಪ್ತಿಯ ಸು.100 ಮೀ ವ್ಯಾಪ್ತಿಯಲ್ಲಿ ಪ್ಲಾಸ್ಟಿಕ್ ಇನ್ನಿತರೆ ತ್ಯಾಜ್ಯವನ್ನು ಸ್ವಚ್ಚಗೊಳಿಸಿ ನಗರಸಭೆಗೆ ನೀಡಲಿದ್ದಾರೆ. ಅಂಗಡಿ ಮುಂಗಟ್ಟುಗಳಲ್ಲಿ ಮುಂತಾದೆಡೆ ಪ್ಲಾಸ್ಟಿಕ್ ಮಾರಾಟ ಅಥವಾ ಬಳಕೆ ಮಾಡುವುದು ಕಂಡುಬಂದಲ್ಲಿ ಅಧಿಕ ದಂಡ ವಿಧಿಸುವುದಲ್ಲದೇ ಸೂಕ್ತ ಕ್ರಮಕೈಗೊಳ್ಳಲಾಗುವುದು ಎಂದು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು.

## ಪ್ರಮುಖ ಸುದ್ದಿ

# ಸತ್ಯ ಶುದ್ಧ ಕಾಯಕದಿಂದ ಶ್ರೇಯಸ್ಸು ಪ್ರಾಪ್ತಿ: ರಂಭಾಪುರಿಶ್ರೀ

» ಭಾಲ್ಕಿ

ಮನುಷ್ಯನಿಗೆ ಏನೆಲ್ಲ ಸಂಪತ್ತು ಸೌಲಭ್ಯಗಳಿದ್ದರೂ ಬದುಕಿನಲ್ಲಿ ಶಾಂತಿ ನೆಮ್ಮದಿಯಿಲ್ಲ. ಸತ್ಕಾರ್ಯಗಳಿಂದ ಮನುಷ್ಯನ ಅಂತರಂಗ ಪರಿಶುದ್ಧಗೊಳ್ಳುತ್ತದೆ. ಸತ್ಯ ಶುದ್ಧ ಕಾಯಕ ಜೀವನದಿಂದ ಶ್ರೇಯಸ್ಸು ದೊರಕುವುದೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶುಕ್ರವಾರ ತಾಲೂಕಿನ ಮೇಹಕರ ಕಟ್ಟಿಮನಿ ಸಂಸ್ಥಾನ ಹಿರೇಮಠದ ಶ್ರೀ ರಾಜೇಶ್ವರ ಶಿವಾಚಾರ್ಯರ ಪಟ್ಟಾಧಿಕಾರ ರಜತ ಮಹೋತ್ಸವದ ಸಮಾರೋಪ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಈಶ ನಿರ್ಮಿತವಾದ ಈ ಪ್ರಪಂಚದಲ್ಲಿ ಇರುವುದೆಲ್ಲವೂ ಅಮೂಲ್ಯ ಸಂಪತ್ತು. ಶ್ರದ್ಧಾವಂತರಾದ ಭಾರತೀಯರು ಮಣ್ಣು ನೀರು ಬೆಂಕಿ ಗಾಳಿ ಇವುಗಳಲ್ಲಿ ದೇವರನ್ನು ಕಂಡು ಪೂಜಿಸಿದವರು. ದೇಹ ಮನ ಬುದ್ಧಿ ಕೈ ಕಾಲು ಇವುಗಳೆಲ್ಲವೂ ನಿಜವಾದ ಸಂಪತ್ತು. ಮನೆಯ ಕಿಡಕಿ ಬಾಗಿಲುಗಳನ್ನು ತೆರೆದಾಗ ಗಾಳಿ ಬೆಳಕು



ಬೀಳುವಂತೆ ನಮ್ಮ ಮನದ ಬಾಗಿಲು ತೆರೆದರೆ ದೇವರ ಕಾರುಣ್ಯದ ಬೆಳಕು ಬೀಳುತ್ತದೆ. ಮನುಷ್ಯನ ಮನಸ್ಸೆಂಬ ಚಂಚಲ ಅಲೆಗಳ ಹೊಯ್ದಾಟವನ್ನು ಶಾಂತ ಪ್ರಶಾಂತಗೊಳಿಸುವ ಮಾರ್ಗವೇ ಆಧ್ಯಾತ್ಮ ಎಂದು ಶ್ರೀ ಜಗದ್ಗುರು ರೇಣುಕಾಚಾರ್ಯರು ಸಿದ್ಧಾಂತ ಶಿಖಾಮಣಿಯಲ್ಲಿ ಬೋಧಿಸಿದ್ದಾರೆ. ರಾಜೇಶ್ವರ ಶ್ರೀಗಳವರ ಪರಿಶ್ರಮ ಸಾಧನೆಯಿಂದ ಮಠ ಮತ್ತು ಭಕ್ತರ ಬಾಳು ಉಜ್ವಲಗೊಂಡಿದೆ. ರಜತ ಮಹೋತ್ಸವ ಅಂಗವಾಗಿ ಜರುಗಿದ ಮೂರು ದಿನಗಳ ಕಾರ್ಯಕ್ರಮ ತಮಗೆ ಸಂತೃಪ್ತಿ ಸಂತೋಷ ತಂದಿದೆ ಎಂದು ಹರುಷ ವ್ಯಕ್ತಪಡಿಸಿದರು.

ಹುಮನಾಬಾದ ಮಾಜಿ ಶಾಸಕ ರಾಜಶೇಖರ ಪಾಟೀಲ ಅವರು ಮಾತನಾಡಿ ಮನುಷ್ಯ ಯಾವಾಗಲೂ ಆಶಾವಾದಿಯಾಗಿ ಬದುಕಬೇಕಲ್ಲದೇ ನಿರಾಶಾವಾದಿಗಳಾಗಬಾರದು. ಜೀವನದಲ್ಲಿ ಭರವಸೆಯ ದೀಪ ಎಂದಿಗೂ ಆರಬಾರದು. ಮನಸ್ಸನ್ನು ದೇವರಿಗೆ ದೇಹವನ್ನು ದುಡಿಮೆಗೆ ಸಮರ್ಪಿಸಿಕೊಂಡು ಬಾಳಿದರೆ ಯಶಸ್ಸು ಕಟ್ಟಿಟ್ಟ ಬುತ್ತಿ. ರಾಜೇಶ್ವರ ಶ್ರೀಗಳವರು 25 ವರ್ಷದ ಅವಧಿಯಲ್ಲಿ ಧಾರ್ಮಿಕ, ಸಾಮಾಜಿಕ ಶೈಕ್ಷಣಿಕ ಮತ್ತು ಕೃಷಿ ಕ್ಷೇತ್ರದಲ್ಲಿ ಅದ್ಭುತ ಸಾಧನೆಯನ್ನು ಮಾಡಿದ್ದಾರೆಂದು ಸಂತೋಷ ವ್ಯಕ್ತಪಡಿಸಿದರು.

ನೇತೃತ್ವ ವಹಿಸಿದ ಮೇಹಕರ ಹಿರೇಮಠದ ರಾಜೇಶ್ವರ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ ಹುಟ್ಟು ಸಾವು ಯಾರನ್ನೂ ಬಿಟ್ಟಿಲ್ಲ. ಇವೆರಡರ ಮಧ್ಯದ ಬದುಕು ಸಮೃದ್ಧಗೊಳ್ಳಬೇಕು. ಮುಳ್ಳಿನ ನಡುವೆ ಗುಲಾಬಿ ಇದ್ದರೂ ಗಾಸಿಗೊಳ್ಳದೇ ಅರಳುತ್ತದೆ. ಹಾಗೆಯೇ ಮನುಷ್ಯ ಎಷ್ಟೇ ಸಂಕಷ್ಟದಲ್ಲಿದ್ದರೂ ಒಂದಿಷ್ಟಾದರೂ ಶಿವಜ್ಞಾನ ಮತ್ತು ಗುರು ಕಾರುಣ್ಯದ ಅರಿವು ಪಡೆಯಬೇಕು. ಶ್ರೀ ರಂಭಾಪುರಿ ಜಗದ್ಗುರುಗಳ ಶುಭಾಗಮನ ಮತ್ತು ಅವರು ಕೊಟ್ಟ ಸಂದೇಶ ನಮ್ಮೆಲ್ಲರ ಬಾಳ ಬದುಕಿಗೆ ಸ್ಫೂರ್ತಿಯಾಗಿದೆ ಎಂದರು.

ಹುಡುಗಿ ಹಿರೇಮಠದ ವಿರೂಪಾಕ್ಷಲಿಂಗ ಶಿವಾಚಾರ್ಯ ಸ್ವಾಮಿಗಳನ್ನು ಮೊದಲ್ಗೊಂಡು ಹಲವಾರು ಮಠಾಧೀಶರು ಮತ್ತು ಗಣ್ಯರು ಸಮಾರಂಭದಲ್ಲಿ ಉಪಸ್ಥಿತರಿದ್ದರು. ಮಾಜಿ ಮುಖ್ಯ ಮಂತ್ರಿ ಧರ್ಮಸಿಂಗರ ಆಪ್ತ ಕಾರ್ಯದರ್ಶಿಯಾಗಿ ಸೇವೆ ಸಲ್ಲಿಸಿದ ಎ.ಬಿ.ಸ್ವಾಮಿ ಅವರು ದಾಸೋಹ ಸೇವೆ ಸಲ್ಲಿಸಿ ರಾಜೇಶ್ವರ ಶ್ರೀಗಳಿಗೆ ಗೌರವ ಸತ್ಕಾರ ನೆರವೇರಿಸಿದರು.

ಶ್ರೀ ಜಗದ್ಗುರು ರೇಣುಕಾಚಾರ್ಯ ಗುರುಕುಲ ಸಾಧಕರಿಂದ ವೇದಘೋಷ, ಗಂಗಾಧರ ಹಿರೇಮಠ ಇವರಿಂದ ಭಕ್ತಿ ಗೀತೆ ಜರುಗಿತು. ಗೊರಟಾ ಹಿರೇಮಠದ ಸಿದ್ವೀರಯ್ಯಸ್ವಾಮಿ ನಿರೂಪಿಸಿದರು.

## ಫಾಸ್ಟ್ ನ್ಯೂಸ್

### ಅನಿಲ ಸಂಪರ್ಕ: ಸಹಾಯ ಧನಕ್ಕೆ ಅರ್ಜಿ ಆಹ್ವಾನ

» ಚಿತ್ರದುರ್ಗ

ನಗರ ಸಭೆಯ ಶೇ.5 ಹಾಗೂ ಶೇ.7.25 ರ ಅನುದಾನದಡಿ 2025-26ನೇ ಸಾಲಿಗೆ ದಿವ್ಯಾಂಗ ಅನಿಲ ರಹಿತ ಕುಟುಂಬಗಳಿಗೆ ಅನಿಲ ಸಂಪರ್ಕ ಪಡೆಯಲು ಸಹಾಯ ಧನ ಒದಗಿಸಲು ಹಿರಿಯೂರು ನಗರಸಭೆಯಿಂದ ಅರ್ಜಿ ಆಹ್ವಾನಿಸಲಾಗಿದೆ. ಸರ್ಕಾರಿ ಸ್ವಾಮ್ಯದ ಸಂಸ್ಥೆಗಳಿಂದ 1 ಸಿಲಿಂಡರ್ ಹಾಗೂ 1 ಸ್ಟೌವ್‌ನ್ನು ಮಾರ್ಗಸೂಚಿಗಳ ಅನುಸಾರ ನೀಡಲಾಗುವುದು. ಶೇ.5 ಹಾಗೂ ಶೇ.7.25 ರ ಅನುದಾನದಡಿ ಬಡ ವಿದ್ಯಾರ್ಥಿಗಳಿಗೆ ವಿಶೇಷ ನೆರವು ಸಹ ನೀಡಲಾಗತ್ತದೆ. ನಗರ ಸಭೆ ವ್ಯಾಪ್ತಿಯ ದಿವ್ಯಾಂಗ ಹಾಗೂ ಬಡ ವಿದ್ಯಾರ್ಥಿಗಳು ಜೂನ್ 10 ರ ಒಳಗೆ ಅರ್ಜಿ ಸಲ್ಲಿಸಿ ಈ ಸೌಲಭ್ಯದ ಸದುಪಯೋಗ ಪಡೆದುಕೊಳ್ಳುವಂತೆ ಪೌರಾಯುಕ್ತ ಎ.ವಾಸೀಂ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಮೇ 27 ರಂದು ಉಚಿತ ಕಣ್ಣಿನ ತಪಾಸಣೆ ಶಿಬಿರ

» ಚಿತ್ರದುರ್ಗ

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಆಸ್ಪತ್ರೆ, ಜಿಲ್ಲಾ ಅಂಧತ್ವ ನಿವಾರಣಾ ವಿಭಾಗ, ನಗರ ಸಭೆ, ಶಿವಮೊಗ್ಗ ಶಂಕರ ಕಣ್ಣಿನ ಆಸ್ಪತ್ರೆ ಹಾಗೂ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಅವರ ಸಹಯೋಗದಲ್ಲಿ ಚಿತ್ರದುರ್ಗ ನಗರದ ಗಾಯಿತ್ರಿ ಕಲ್ಯಾಣ ಮಂಟಪದಲ್ಲಿ ಮೇ 27 ರಂದು ಸಂಜೆ 4 ಗಂಟೆಗೆ ಉಚಿತ ಕಣ್ಣಿನ ತಪಾಸಣೆ, ಶಸ್ತ್ರಚಿಕಿತ್ಸೆ ಹಾಗೂ ಕನ್ನಡಕ ವಿತರಣಾ ಶಿಬಿರ ಆಯೋಜಿಸಲಾಗಿದೆ. ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ, ಕಾರ್ಯಕ್ರಮ ಉದ್ಘಾಟಿಸುವರು. ಚಲನಚಿತ್ರ ಕಲಾವಿದ ದೊಡ್ಡಣ್ಣ ಘನ ಉಪಸ್ಥಿತರಿರುವರು. ನಗರಸಭೆ ಅಧ್ಯಕ್ಷೆ ಸುಮಿತಾ.ಬಿ.ಎನ್. ಅಧ್ಯಕ್ಷತೆ ವಹಿಸುವರು. ಗೌರವಾನ್ವಿತ ಅತಿಥಿಗಳಾಗಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ್ ಬಂಡಾರು, ಜಿ.ಪಂ.ಸಿಇಓ ಸೋಮಶೇಖರ್.ಎಸ್.ಜೆ, ಜಿಲ್ಲಾ ಆರೋಗ್ಯಾಧಿಕಾರಿ ಡಾ.ರೇಣುಪ್ರಸಾದ್.ಜಿ.ಪಿ, ಜಿಲ್ಲಾ ಶಸ್ತ್ರಚಿಕಿತ್ಸೆ ಡಾ.ರವೀಂದ್ರ, ಡಿಡಿಪಿಐ ಮಂಜುನಾಥ್, ಪೌರಾಯುಕ್ತೆ ರೇಣುಕಾ. ಎಂ, ನಗರ ಸಭೆ ಉಪಾಧ್ಯಕ್ಷೆ ಶ್ರೀದೇವಿ ಚಕ್ರವರ್ತಿ.ಜಿ.ಎಸ್, ಜಿಲ್ಲಾ ಅಂಧತ್ವ ನಿವಾರಣಾ ಕಾರ್ಯಕ್ರಮ ಅಧಿಕಾರಿ ಡಾ.ನಾಗರಾಜ್.ಜಿ.ಓ, ತಹಶೀಲ್ದಾರ್ ಗೋವಿಂದ್‌ರಾಜ್.ಬಿ.ಎಂ., ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್ ಭಾಗವಹಿಸುವರು. ಶಾಸಕ ಕೆ.ಸಿ.ವೀರೇಂದ್ರ ಪಪ್ಪಿಯವರು ಕ್ಷೇತ್ರ 22 ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಉಚಿತ ಕಣ್ಣಿನ ತಪಾಸಣೆ ಶಿಬಿರ ಆಯೋಜಿಸಿದ್ದಾರೆ. ಇದರಲ್ಲಿ 6451 ಜನರು ಪರೀಕ್ಷೆ ನಡೆಸಿದ್ದು, 667 ಜನರಿಗೆ ಕಣ್ಣಿನ ಶಸ್ತ್ರಚಿಕಿತ್ಸೆ ನಡೆಸಲಾಗಿದೆ. 2460 ಜನರಿಗೆ ಕನ್ನಡಕ ಪಡೆದಿದ್ದಾರೆ. ಮೇ 27 ಶಿಬಿರದಲ್ಲಿ ಹೆಚ್ಚಿನ ಜನರು ಪಾಲ್ಗೊಂಡು ಸದುಪಯೋಗ ಪಡೆದುಕೊಳ್ಳೂವಂತೆ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

### ಎಸ್.ಆರ್.ಶೀತಲ್‌ಗೆ ಮೂರು ಚಿನ್ನದ ಪದಕಗಳು




» ದಾವಣಗೆರೆ

ಬೆಂಗಳೂರಿನ ಕೃಷಿ ವಿಶ್ವವಿದ್ಯಾಲಯದ ಡಾ.ಬಾಬು ರಾಜೇಂದ್ರ ಪ್ರಸಾದ್ ಅಂತರಾಷ್ಟ್ರೀಯ ಕನ್ವೆಷನ್ ಸೆಂಟರ್‌ನಲ್ಲಿ ಮೇ 15ರಂದು ನಡೆದ 59ನೇ ಘಟಿಕೋತ್ಸವದಲ್ಲಿ ದಾವಣಗೆರೆ ಜಿಲ್ಲೆಯ ಜಗಳೂರು ತಾಲೂಕಿನ ಬಿದರಕೆರೆ ಗ್ರಾಮದ ಎಸ್.ಬಿ.ರುದ್ರಕುಮಾರ್ ಇವರ ಪುತ್ರಿಯಾದ ಎಸ್. ಆರ್. ಶೀತಲ್ ಮೂರು ಚಿನ್ನದ ಪದಕಗಳನ್ನು ಪಡೆದಿದ್ದಾರೆ. 2023-24ನೇ ಸಾಲಿನಲ್ಲಿ 10,000 ಅಂಕಗಳಿಗೆ ಸರಾಸರಿ 9.104 ಅಂಕಗಳನ್ನು ಗಳಿಸಿ ಪ್ರಥಮ ಶ್ರೇಯಾಂಕಿತರಾಗಿರುವ ಎಸ್. ಆರ್. ಶೀತಲ್ ಅವರು ಬೆಂಗಳೂರಿನ ಕೃಷಿ ವಿಶ್ವವಿದ್ಯಾನಿಲಯದಿಂದ ಕೊಡ ಮಾಡುವ ಕೃಷಿ ವಿಶ್ವವಿದ್ಯಾನಿಲಯದ ಚಿನ್ನದ ಪದಕ, ಜಿಂದಾಲ್ ಅಲ್ಯೂಮಿನಿಯಂ ಲಿಮಿಟೆಡ್ ಚಿನ್ನದ ಪದಕ ಹಾಗೂ ಡಾ.ಆರ್.ರಾಮಯ್ಯ ಚಿನ್ನದ ಪದಕಗಳನ್ನು ಪಡೆದಿದ್ದಾರೆ.

### ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆ

» ದಾವಣಗೆರೆ

ಜಿಲ್ಲಾಧಿಕಾರಿಗಳು ಹಾಗೂ ಜನನ-ಮರಣಗಳ ನೋಂದಣಾಧಿಕಾರಿಗಳು ಅವರ ಅಧ್ಯಕ್ಷತೆಯಲ್ಲಿ ಮೇ.26 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಜನನ ಮರಣನೋಂದಣಿಯ ನಾಗರೀಕ ನೋಂದಣಿ ಪದ್ಧತಿಯಡಿ ಯಲ್ಲಿ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯನ್ನು ಆಯೋಜಿಸಲಾಗಿದೆ ಎಂದು ಅಪರ ಜಿಲ್ಲಾ ಜನನ-ಮರಣ ನೋಂದಣಾಧಿಕಾರಿಗಳು ತಿಳಿಸಿದ್ದಾರೆ.

# ಜೀವನೋತ್ಸಾಹಕ್ಕೆ ಪ್ರಕೃತಿಗಿಂತ ದೊಡ್ಡ ಗುರು ಬೇಕಿಲ್ಲ

## ಹುಚ್ಚು ಹಿಡಿಯುವುದು ಮನುಷ್ಯನಿಗೆ ಮಾತ್ರ-ಕಾಡು ಪ್ರಾಣಿಗಳಿಗೆ ಹುಚ್ಚು ಹಿಡಿಯಲ್ಲ: ಕೆ.ವಿ.ಪ್ರಭಾಕರ್

» ಬಿಳಿಗಿರಿರಂಗನಬೆಟ್ಟ

ಇವತ್ತಿನ ದಿನ ಮನೆಗಳಲ್ಲಿ ಕೊಠಡಿಗಳು ಹೆಚ್ಚಾಗುತ್ತಾ, ಮನಸ್ಸುಗಳು ದೂರವಾಗುತ್ತಾ ಮೊಬೈಲ್ ಮತ್ತು ರಿಮೋಟ್ ಕೈಗೆ ಜೀವನೋತ್ಸಾಹ ಬಲಿ ಕೊಡುತ್ತಿದ್ದೇವೆ ಎಂದು ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾದ ಕೆ.ವಿ.ಪ್ರಭಾಕರ್ ನುಡಿದರು.

ಸುತ್ತೂರು ಶ್ರೀಕ್ಷೇತ್ರ, ಜಗದ್ಗುರು ವೀರಸಿಂಹಾಸನ ಮಹಾಸಂಸ್ಥಾನ ಮಠ ಆಯೋಜಿಸಿದ್ದ "ಜೀವನೋತ್ಸಾಹ" ಶಿಬಿರದ ಅಧ್ಯಕ್ಷತೆ ವಹಿಸಿ ಮಾತನಾಡಿದರು. ವೃದ್ಧಾಶ್ರಮಗಳು, ಆಸ್ಪತ್ರೆಗಳು ಹೆಚ್ಚಾಗುತ್ತಿರುವುದು ಆರೋಗ್ಯಕರ ಸಮಾಜದ ಲಕ್ಷಣ ಅಲ್ಲ. ದುಡಿಮೆ, ಹಣ ಪರಿಹಾರವಾಗುವ ಬದಲಿಗೆ, ಸಮಸ್ಯೆ ಮಾಡಿಕೊಂಡಿದ್ದೇವೆ ಎಂದು ಬೇಸರ ವ್ಯಕ್ತಪಡಿಸಿದರು.

ಪ್ರಕೃತಿಯ ಮಡಿಲಿನಲ್ಲಿರುವ ಬಿಳಿಗಿರಿರಂಗನ ಬೆಟ್ಟದಲ್ಲಿ "ಜೀವನೋತ್ಸಾಹ ಶಿಬಿರ"ವನ್ನು ಶ್ರೀಮಠ ಆಯೋಜಿಸಿರುವುದು ಹೆಚ್ಚು ಅರ್ಥಪೂರ್ಣವಾಗಿದೆ. ನಾನು ಕಾಂಕ್ರೀಟ್ ಕಾಡಿನಿಂದ ಹೊರಟು, ಪ್ರಕೃತಿಕ ಸಾಲಿನಲ್ಲಿ ಈ ಬೆಟ್ಟಕ್ಕೆ ಬರುವಾಗ ನನಗೆ ಅನ್ನಿಸಿದ್ದು, ಪ್ರಕೃತಿಯೆ ಜೀವನೋತ್ಸಾಹದ ಚಿಲುಮೆ ಆಗಿದೆ ಎಂದು ಬಣ್ಣಿಸಿದರು.

ಹುಚ್ಚು ಹಿಡಿಯೋದು ಮನುಷ್ಯನಿಗೆ ಮತ್ತು ಮನುಷ್ಯನ ಸಹವಾಸದಲ್ಲಿರುವ ಪ್ರಾಣಿಗಳಿಗೆ ಮಾತ್ರ. ಮನುಷ್ಯನಿಗೆ ಹುಚ್ಚಾಸ್ಪತ್ರೆಗಳಿವೆ. ಕಾಡು ಪ್ರಾಣಿಗಳಿಗೆ ಅಂತ ಹುಚ್ಚಾಸ್ಪತ್ರೆ ಇರುವುದು ನನಗಂತೂ ಗೊತ್ತಿಲ್ಲ.ಹಾಗೆಯೇ ಜೀವನದ




ಸವಾಲುಗಳನ್ನು ಎದುರಿಸಲಾಗದೆ ಆತ್ಮಹತ್ಯೆಗೆ ಶರಣಾಗುವ ಪ್ರವೃತ್ತಿ ಇರುವುದೂ ಕೂಡ ಮನುಷ್ಯನಲ್ಲೇ.

ಎಂಥಾದ್ದೇ ಕಠಿಣ ಸಂದರ್ಭವನ್ನೂ ಜೀರ್ಣಿಸಿಕೊಂಡು ಬದುಕುವುದನ್ನು ಪ್ರಕೃತಿ ನಮಗೆ ಕಲಿಸುತ್ತದೆ. ಎಂಥಾದ್ದೇ ಭೀಕರ ಬರಗಾಲ, ಪ್ರವಾಹ, ಮಳೆ, ಗಾಳಿ, ಬೆಂಕಿ, ಕಾಡ್ಗಿಚ್ಚು ಬಂದರೂ ಪ್ರಕೃತಿ ಮತ್ತೆ ತಲೆ ಎತ್ತಿ ನಿಲ್ಲುತ್ತದೆ.

ಕತ್ತಲಾದ ಮೇಲೆ ಮತ್ತೆ ಬೆಳಕು ಆಗಲೇ ಬೇಕು ಎನ್ನುವುದು ಪ್ರಕೃತಿಯ ನಿಯಮ. ಹಾಗೆಯೇ ಮನುಷ್ಯ ಜೀವನದಲ್ಲೂ ಕಷ್ಟದ ಸಂದರ್ಭಗಳು ಬರಬಹುದು, ಆ ಸಂದರ್ಭಗಳೂ ಅಳಿಸಿ ಹೋಗುತ್ತವೆ ಎನ್ನುವುದರ ಸಂಕೇತ ಇದು. ಎಲ್ಲಕ್ಕಿಂತ " ಪರಸ್ಪರತೆ ಇದ್ದರೆ ಮಾತ್ರ ಹೆಚ್ಚು ಗಟ್ಟಿಯಾಗಿ ಬೇರು ಬಿಡಬಹುದು, ಕೂಡಿ ಬಾಳಬಹುದು ಎನ್ನುವ ಪಾಠ ಪ್ರಕೃತಿಯಲ್ಲಿದೆ. ಜೀವನದಲ್ಲಿ ಸಮತೋಲನವನ್ನು ಕಾಪಾಡಿಕೊಳ್ಳುವುದು, ನಮ್ಮ ಸಂತೋಷ, ದುಃಖ ಮತ್ತು ಭಯ, ಅಭದ್ರತೆಗಳ ನಡುವೆಯೂ ನಾವು ಸಮಾಧಾನದಿಂದ ಜೀವನ ರೂಪಿಸಿಕೊಳ್ಳಬಹುದು ಎನ್ನುವ ಭರವಸೆ ನಮಗೆ ಪ್ರಕೃತಿಯಿಂದ ಸಿಗುತ್ತದೆ.ಪಕ್ಷಿಗಳು ಎಲ್ಲೋ ಹಣ್ಣು ತಿಂದು ಇನ್ನೆಲ್ಲೋ ಬೀಜಗಳನ್ನು ವಿಸರ್ಜಿಸುತ್ತವೆ. ಆ ಬೀಜಗಳು ಬಿದ್ದ ಜಾಗದಲ್ಲೇ ಮೊಳಕೆಯೊಡೆಯುತ್ತವೆ.

ಸಣ್ಣ ರಾಗಿ ಕಾಳು, ಇದರೊಳಗೆ ಮೊಳಕೆಯೊಡೆಯುವ ಶಕ್ತಿ ಇದ್ದರೆ ಅದು ಭೂಮಿಯನ್ನೇ ಸೀಳಿಕೊಂಡು ಮೇಲೆ ಬರುತ್ತದೆಯೇ ಹೊರತು, ಭೂಮಿ ಗಟ್ಟಿಯಾಗಿದೆ ಎಂದು ಆತ್ಮಹತ್ಯೆ ಮಾಡಿಕೊಳ್ಳುವುದಿಲ್ಲ.ಜಿಂಕೆ, ನವಿಲುಗಳು ಹುಲಿ, ಚಿರತೆಗಳಿಗೆ ಹೆದರಿ ಊಟ ಬಿಡುವುದಿಲ್ಲ, ಡಿಪ್ರೆಷನ್ ಗೆ ಹೋಗುವುದಿಲ್ಲ. ಎಲ್ಲಾ ಅಪಾಯಗಳ ನಡುವೆಯೂ ಬದುಕುಳಿಯುತ್ತವೆ, ಜೀವನೋತ್ಸಾಹ ಕಳೆದುಕೊಳ್ಳುವುದಿಲ್ಲ.

ಯಾವುದೇ ಒಂದು ಬೆಳವಣಿಗೆ ಮತ್ತು ಬದಲಾವಣೆ ಆತುರದಿಂದ ಆಗಲು ಸಾಧ್ಯವಿಲ್ಲ. ಅವುಗಳಿಗೆ ಸಮಯ, ಪೋಷಣೆ ಮತ್ತು ಪರಿಶ್ರಮ ಬೇಕಾಗುತ್ತದೆ. ವೇಗದ ಜಗತ್ತಿನಲ್ಲಿ, ಪ್ರಕೃತಿಯು ನಮ್ಮೊಂದಿಗೆ ಮತ್ತು ಇತರರೊಂದಿಗೆ ತಾಳ್ಮೆಯಿಂದಿರಲು ನೆನಪಿಸುತ್ತದೆ ಎಂದರು. ನಮ್ಮ ಹಾಡು, ಸಂಗೀತ, ನೃತ್ಯ, ಚಿತ್ರಕಲೆ ಎಲ್ಲಕ್ಕೂ ಪ್ರಕೃತಿಯೇ ಮೂಲ ಧಾತುವಾಗಿದೆ. ನವಿಲಿನ ಕುಣಿತ ನೃತ್ಯಕ್ಕೆ ಮೂಲವಾದರೆ, ಬೀಸುವ ಗಾಳಿಯ ನಾದ ಸಂಗೀತದ ಮೂಲ, ಮಳೆ ನೀರಿನ ಸದ್ದು- ಹಕ್ಕಿಗಳ ಚಿಲಿಪಿಲಿ ಹಾನಡಿ ಮೂಲ, ಜಲಪಾತ, ನೀರಿನ ತೊರೆಗಳು, ಜಿಂಕೆಯ ಓಟ ಚಿತ್ರಕಲೆಗೆ ಮೂಲ ಸ್ಫೂರ್ತಿ... ಹೀಗಾಗಿ ಪ್ರಕೃತಿಯಿಂದ ಬೇರ್ಪಟ್ಟವನು ಹುಚ್ಚನಾಗುತ್ತಾನೆ, ಆತ್ಮಹತ್ಯೆ ಮಾಡಿಕೊಳ್ಳುತ್ತಾನೆ. ಪರಿಸರದಲ್ಲಿ ಸಮತೋಲನ ತಪ್ಪಿದ್ದರಿಂದ ನೂರಾರು ರೀತಿಯ ವೈರಸ್ ಗಳು, ಬ್ಯಾಕ್ಟೀರಿಯಾಗಳು ಸೃಷ್ಟಿ ಆಗುತ್ತಿವೆ. ಕೋವಿಡ್, ಆಂಥ್ರಾಕ್ಸ್ ರೋಗಗಳು ಬರಲು ಪ್ರಕೃತಿಕ ಸಮತೋಲನ ತಪ್ಪಿದ್ದೇ ಕಾರಣ ಎಂದು ಜೀವ ವಿಜ್ಞಾನಿಗಳು ಎಚ್ಚರಿಸಿದ್ದನ್ನು ನಾವು ನೆನಪಿಸಿಕೊಳ್ಳಬೇಕು ಎಂದರು.ಚಾಮರಾಜನಗರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕವಿತಾ, ಕೆಪಿಎಸ್ಸಿ ಸದಸ್ಯರಾದ ಪ್ರಭುದೇವ, ಹಿರಿಯ ಕಲಾವಿದ ಮುಖ್ಯಮಂತ್ರಿ ಚಂದ್ರು ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು.

# ಜನಾಕ್ರೋಶ ಕೇವಲ ರಾಜಕೀಯವಾಗಿಯೇ ಹೊರತು, ಜನರಲ್ಲಿ ಆಕ್ರೋಶ ಇಲ್ಲ: ಸಿಎಂ

» ಕೆ.ಆರ್.ನಗರ

ಪ್ರಜಾಪ್ರಭುತ್ವದ ವ್ಯವಸ್ಥೆಯಲ್ಲಿ ಜನರೇ ಮಾಲೀಕರು. ಕ್ಷೇತ್ರಗಳ ಅಭಿವೃದ್ಧಿ, ಜನರ ಸಮಸ್ಯೆಗಳಿಗೆ ಪರಿಹಾರ ಒದಗಿಸುವುದು ಸರ್ಕಾರದ ಹಾಗೂ ಶಾಸಕರ ಕರ್ತವ್ಯ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಅವರು ಇಂದು ಕೆ.ಆರ್. ನಗರ ವಿಧಾನಸಭಾ ವ್ಯಾಪ್ತಿಯಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳ ಶಂಕುಸ್ಥಾಪನೆ ಮತ್ತು ಉದ್ಘಾಟನೆ ನೆರವೇರಿಸಿ ಮಾತನಾಡಿದರು.

ಕೆ.ಆರ್. ನಗರ ವಿಧಾನಸಭಾ ಕ್ಷೇತ್ರಕ್ಕೆ 404 ಕೋಟಿ ರೂ.ಗಳ ಶಂಕುಸ್ಥಾಪನೆ , 109 ಕೋಟಿ ರೂ.ಗಳ ವೆಚ್ಚದ ಕಾಮಗಾರಿಗಳ ಉದ್ಘಾಟನೆ ಸೇರಿ ಒಟ್ಟು 513 ಕೋಟಿ ರೂ.ಗಳ ವೆಚ್ಚದ ಕಾಮಗಾರಿಗಳಿಗೆ ಉದ್ಘಾಟನೆ ಮತ್ತು ಶಂಕುಸ್ಥಾಪನೆ ನೆರವೇರಿದ್ದು, ಇದಕ್ಕೆ ಸ್ಥಳೀಯ ಶಾಸಕರಾದ ರವಿಶಂಕರ್ ಕಾರಣ ಎಂದು ಮುಖ್ಯಮಂತ್ರಿಗಳು ತಿಳಿಸಿದರು. ಸಣ್ಣ ನೀರಾವರಿ ಸಚಿವರು 197 ಕೋಟಿ ರೂ.ಗಳ ವೆಚ್ಚದ ಶಂಕುಸ್ಥಾಪನೆ ಮತ್ತು ಉದ್ಘಾಟನೆಯನ್ನು ತಮ್ಮ ಇಲಾಖೆಯೊಂದರಲ್ಲಿಯೇ ಮಾಡಿದ್ದಾರೆ. ಆರೋಗ್ಯ ಇಲಾಖೆಯಡಿ ತಾಯಿ ಮತ್ತು ಮಕ್ಕಳ ಆಸ್ಪತ್ರೆ ಉದ್ಘಾಟನೆ ನೆರವೇರಿದೆ ಎಂದರು.

**ಪಾಪರ್ ಸರ್ಕಾರವಾಗಿದ್ದರೆ 513 ಕೋಟಿ ರೂ.ಗಳ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿತ್ತೇ?:** ಬಿಜೆಪಿ ಮತ್ತು ಜೆಡಿಎಸ್ ಪಕ್ಷಗಳು ಗ್ಯಾರಂಟಿ ಯೋಜನೆಗಳನ್ನು ಜಾರಿ ಮಾಡಿದ್ದರಿಂದ ಅಭಿವೃದ್ಧಿ ಕಾರ್ಯಗಳಿಗೆ ಈ ಸರ್ಕಾರದ ಬಳಿ ಹಣವಿಲ್ಲ ಎಂದು ಟೀಕಿಸುತ್ತಾರೆ. ಪಾಪರ್ ಸರ್ಕಾರವಾಗಿದ್ದರೆ 513 ಕೋಟಿ ರೂ.ಗಳ ಕಾಮಗಾರಿಗಳನ್ನು ಇಲ್ಲಿ ಕೈಗೊಳ್ಳಲು ಸಾಧ್ಯವಾಗುತ್ತಿತ್ತೇ? ಎಂದು ಪ್ರಶ್ನಿಸಿದ ಮುಖ್ಯಮಂತ್ರಿಗಳು ಬಿಜೆಪಿ ಮತ್ತು ಜೆಡಿಎಸ್ ಅಧಿಕಾರದಲ್ಲಿದ್ದಾಗ ಏನೂ ಮಾಡಲಿಲ್ಲ. ಆದರೆ ಟೀಕೆ ಮಾಡುವುದನ್ನು ಹಾಗೂ ಸುಳ್ಳು



ಹೇಳುವುದನ್ನು ಮಾತ್ರ ಬಿಡುವುದಿಲ್ಲ. ಬಿಜೆಪಿ ಜೆಡಿಎಸ್ ಪಕ್ಷಗಳು ಹೇಳಿಕೊಂಡಿರುವ ಚಾರ್ಜ್ ಶೀಟ್ ನಲ್ಲಿ ಬರೀ ಸುಳ್ಳುಗಳನ್ನೇ ಹೇಳಿದ್ದಾರೆ. ಹೀಗೆ ಅವರಿಗೆ ಸುಳ್ಳು ಹೇಳಲು ನಾಚಿಕೆಯಾಗುವುದಿಲ್ಲವೇ ಎಂದರು. ಆರ್.ಅಶೋಕ್, ಹೆಚ್. ಡಿ. ಕುಮಾರ್ ಸ್ವಾಮಿ, ಬಿ.ಎಸ್.ಯಡಿಯೂರಪ್ಪ, ವಿಜಯೇಂದ್ರ, ಛಲವಾದಿ ನಾರಾಯಣಸ್ವಾಮಿ ಇವರೆಲ್ಲರೂ ಬಹಳ ವರ್ಷಗಳಿಂದ ರಾಜಕೀಯದಲ್ಲಿದ್ದು, ಸುಳ್ಳು ಹೇಳುತ್ತಿದ್ದಾರೆ. ಪಂಚ ಗ್ಯಾರಂಟಿ ಯೋಜನೆಗಳನ್ನು ನಮ್ಮ ಸರ್ಕಾರ ಜಾರಿ ಮಾಡಿದೆ. ಜನರು ಈ ಯೋಜನೆಗಳ ಸದುಪಯೋಗಪಡಿಸಿಕೊಳ್ಳುತ್ತಿರುವಾಗ ಸುಳ್ಳು ಎಂದು ಹೇಗೆ ಹೇಳುತ್ತಾರೆ ಎಂದರು. ರಾಜ್ಯದ 3.50 ಕೋಟಿ ಮಹಿಳೆಯರು ಯಾವುದೇ ಬೇಧ ಭಾವವಿಲ್ಲದೇ ಶಕ್ತಿ ಯೋಜನೆಯನ್ನು ಬಳಸಿಕೊಂಡಿದ್ದಾರೆ. ಬಿಜೆಪಿ ಸರ್ಕಾರ ಇಂಥ ಯೋಜನೆಯನ್ನು ಜಾರಿ ಮಾಡಿತ್ತೇ? ಎಂದು ಪ್ರಶ್ನಿಸಿದ ಸಿಎಂ ಈವರೆಗೆ 500 ಕೋಟಿ ಮಹಿಳೆಯರು ಉಚಿತವಾಗಿ ಓಡಾಡಿದ್ದಾರೆ. ಪ್ರತಿ ದಿನ 50-60 ಲಕ್ಷ ಮಹಿಳೆಯರು ಇದರ ಪ್ರಯೋಜನ ಪಡೆಯುತ್ತಿದ್ದಾರೆ ಎಂದರು.

**ಜಿಎಸ್ ಟಿ ಸಂಗ್ರಹಣೆಯಲ್ಲಿ ಕರ್ನಾಟಕ ಎರಡನೇ ಸ್ಥಾನದಲ್ಲಿದೆ:** ಜಿಎಸ್ ಟಿ ಸಂಗ್ರಹಣೆಯಲ್ಲಿ ಕರ್ನಾಟಕ ಎರಡನೇ ಸ್ಥಾನದಲ್ಲಿದೆ. ಮುಂದಿನ ವರ್ಷ ನಾವು ಮೊದಲ ಸ್ಥಾನಕ್ಕೆ ಬರುವ ಪ್ರಯತ್ನ ಮಾಡುತ್ತೇವೆ ಎಂದ ಮುಖ್ಯಮಂತ್ರಿಗಳು, ಕಬಿನಿ ಸೇತುವೆಗೆ 25 ಕೋಟಿ ರೂ.ಗಳ ಅನುದಾನವನ್ನು ಒದಗಿಸಲಾಗಿದೆ . ಚುಂಚನಕಟ್ಟೆ ಶ್ರೀರಾಮ ಸಕ್ಕರೆ ಕಾರ್ಖಾನೆಯನ್ನು 40 ವರ್ಷಗಳ ಅವಧಿಗೆ ಗುತ್ತಿಗೆ ನೀಡಲಾಗಿದೆ. ಸಾಗರಕಟ್ಟೆ ಸೇತುವೆ, ರಸ್ತೆ ಅಗಲೀಕರಣ ಕಾಮಗಾರಿಗಳಿಗೆ ಅನುದಾನ ಒದಗಿಸಲಾಗಿದೆ. ಎಲ್ಲರೂ ಒಂದೇ ತಾಯಿಯ ಮಕ್ಕಳಂತೆ ಇರಬೇಕೆಂಬುದು ಸರ್ಕಾರದ ಆಶಯ ಎಂದರು.

**ಜನಾಕ್ರೋಶ ಕಾರ್ಯಕ್ರಮ ಮೂಲಕ ಬಿಜೆಪಿ ಸುಳ್ಳು ಪ್ರಚಾರ:** ಶಕ್ತಿ ಯೋಜನೆಯಿಂದ ಧರ್ಮಸ್ಥಳ ಕ್ಷೇತ್ರಕ್ಕೆ ಭಕ್ತಾದಿಗಳ ಸಂಖ್ಯೆ ಹೆಚ್ಚಾಗಿರುವುದನ್ನು ಪ್ರಶಂಸಿಸಿ ಧರ್ಮಸ್ಥಳದ ಧರ್ಮಾಧಿಕಾರಿ ವೀರೇಂದ್ರ ಹೆಗ್ಗಡೆಯವರು ಪತ್ರ ಬರೆದಿದ್ದರು. ಗ್ಯಾರಂಟಿ ಯೋಜನೆಗಳು ಜನರ ಮೆಚ್ಚುಗೆಗೆ ಪಾತ್ರವಾಗಿದೆ. ಇತ್ತೀಚೆಗೆ ಹೊಸಪೇಟೆಯಲ್ಲಿ ನಡೆದ ಸರ್ಕಾರದ ಎರಡು ವರ್ಷದ ಕಾರ್ಯಕ್ರಮ ಯಶಸ್ವಿಯಾಗಿ ನಡೆದು, ಸುಮಾರು 3 ರಿಂದ 4 ಲಕ್ಷ ಜನ ಆಗಮಿಸಿದ್ದರು.

### ಪರಿಶಿಷ್ಟ ಜಾತಿಗಳ ಸಮಗ್ರ ಸಮೀಕ್ಷೆ -2025 ಅವಧಿ ವಿಸ್ತರಣೆ

» ಬೆಂಗಳೂರು

ಸರ್ಕಾರದ ಆದೇಶ ದಿನಾಂಕ 2024 ನೇ ನವೆಂಬರ್ 12 ರಲ್ಲಿ ರಾಜ್ಯದಲ್ಲಿ ಶಿಕ್ಷಣ ಮತ್ತು ಸರ್ಕಾರಿ ಸೇವೆಗಳಲ್ಲಿ ಪರಿಶಿಷ್ಟ ಜಾತಿಯ ವಿವಿಧ ಉಪ ಜಾತಿಗಳಿಗೆ ಸೇರಿದವರ ಪ್ರಾತಿನಿಧ್ಯತೆ ಕುರಿತು ಇಟಕಿಡಿಟಿಚಿಟ ಆಚಿಣಚಿ ಪಡೆದು ಪರಿಶಿಷ್ಟ ಜಾತಿಯಲ್ಲಿ ಒಳ ಮೀಸಲಾತಿ ಬಗ್ಗೆ ಸೂಕ್ತ ಶಿಫಾರಸ್ಸಿನೊಂದಿಗೆ ವರದಿ ಸಲ್ಲಿಸಲು ಕರ್ನಾಟಕ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರಾದ ಡಾ: ಹೆಚ್.ಎನ್. ನಾಗಮೋಹನ್ ದಾಸ್ ಇವರ ಅಧ್ಯಕ್ಷತೆಯಲ್ಲಿ ಏಕ ಸದಸ್ಯ ಆಯೋಗವನ್ನು ರಚಿಸಲಾಗಿರುತ್ತದೆ. ಪರಿಶಿಷ್ಟ ಜಾತಿಯಲ್ಲಿನ 101 ಜಾತಿಗಳ ವೈಜ್ಞಾನಿಕ ವರ್ಗೀಕರಣ ಮಾಡಲು ದತ್ತಾಂಶವನ್ನು (ಇಟಕಿಜಡಿಟಿಚಿಟ ಆಚಿಣಚಿ) ಸಂಗ್ರಹಿಸಲು ಹೊಸದಾದ ಸಮೀಕ್ಷೆಯನ್ನು ನಡೆಸಲು ದಿನಾಂಕ: 27-03-2025 ರ ಆಯೋಗದ ಮಧ್ಯಂತರ ವರದಿಯಲ್ಲಿ ಸರ್ಕಾರಕ್ಕೆ ಶಿಫಾರಸ್ಸು ಮಾಡಲಾದ ಹಿನ್ನೆಲೆಯಲ್ಲಿ ಸಮೀಕ್ಷೆಯನ್ನು ದಿನಾಂಕ: 05-05-2025 ರಿಂದ ಗಣತಿದಾರರು ಮನೆ-ಮನೆಗೆ ಭೇಟಿ ನೀಡಿ ಮಾಹಿತಿ ಸಂಗ್ರಹಿಸುವುದರ ಮೂಲಕ ರಾಜ್ಯಾದ್ಯಂತ ಈಗಾಗಲೇ ಪ್ರಾರಂಭಿಸಲಾಗಿರುತ್ತದೆ. ಬಿಬಿಎಂಪಿ ವ್ಯಾಪ್ತಿಯ ವಲಯಗಳಲ್ಲಿ ಪರಿಶಿಷ್ಟ ಜಾತಿ ಜನಾಂಗದ ಸಮೀಕ್ಷೆ ಕಾರ್ಯವು ಇನ್ನೂ ಪ್ರಗತಿಯಾಗಬೇಕಾಗಿರುವುದರಿಂದ, ಮಳೆ/ಹವಾಮಾನ ವೈಪರೀತ್ಯ ಕಾರಣಗಳಿಂದಾಗಿ, ಅನೇಕ ಪರಿಶಿಷ್ಟ ಜಾತಿ ಸಂಘಗಳಿಂದ ಮತ್ತು ಬೆಂಗಳೂರು ಮಹಾನಗರ ಪಾಲಿಕೆ ವತಿಯಿಂದ ಕೋರಿಕೆಯ ಮೇರೆಗೆ ಸಮೀಕ್ಷಾ ಕಾರ್ಯವನ್ನು ಪೂರ್ಣಗೊಳಿಸಲು ಅನುವಾಗುವಂತೆ ದಿನಾಂಕವನ್ನು ವಿಸ್ತರಿಸಲು ನಿರ್ಣಯಿಸಲಾಗಿದೆ. ಮನೆ-ಮನೆ ಭೇಟಿ ನೀಡಿ ಸಮೀಕ್ಷೆಯು ದಿನಾಂಕ:26-05-2025 ರಿಂದ 29-05-2025 ರವರೆಗೆ ವಿಸ್ತರಿಸಲಾಗಿದೆ. ವಿಶೇಷ ಶಿಬಿರ (ಸಮೀಕ್ಷಾ ಬ್ಲಾಕ್ ವ್ಯಾಪ್ತಿಯಲ್ಲಿ) - 03 ದಿನಗಳ ಕಾಲ - ಮೇ 30, 31 ಹಾಗೂ 01 ನೇ ಜೂನ್ -2025 ರವರೆಗೆ ಮರು ನಿಗದಿಪಡಿಸಲಾಗಿದೆ ಮತ್ತು ಆನ್ ಲೈನ್ ಮೂಲಕ ಸ್ವಯಂ ಘೋಷಣೆ- ದಿನಾಂಕ: 01-06-2025 ರವರೆಗೆ ಮುಂದುವರೆಯಲಿದೆ ಎಂದು ಏಕ ಸದಸ್ಯ ಆಯೋಗದ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ತೋಟಗಾರಿಕೆ ತರಬೇತಿ: ಅರ್ಜಿ

**ಚಿತ್ರದುರ್ಗ:** 2025-26ನೇ ಸಾಲಿಗೆ ಚಿತ್ರದುರ್ಗ ತಾಲ್ಲೂಕಿನ ಹಿರೇಗುಂಟನೂರು ಹೋಬಳಿಯ ಐಯ್ಯನಹಳ್ಳಿ ಗ್ರಾಮದ ತೋಟಗಾರಿಕೆ ತರಬೇತಿ ಕೇಂದ್ರದಲ್ಲಿ 10 ತಿಂಗಳ ತೋಟಗಾರಿಕೆ ತರಬೇತಿ ನೀಡಲು ಅರ್ಜಿ ಆಹ್ವಾನಿಸಲಾಗಿದೆ.

## ಪ್ರಮುಖ ಸುದ್ದಿ

### ರಾಮನಗರಕ್ಕೆ ಬೆಂಗಳೂರು ದಕ್ಷಿಣ ಜಿಲ್ಲೆ ಮರುನಾಮಕರಣ

# ರಾಜ್ಯ ಸರ್ಕಾರಕ್ಕೆ ತೀರ್ಮಾನಿಸುವ ಅಧಿಕಾರವಿದೆ: ಸಿಎಂ

» ಮೈಸೂರು

ರಾಮನಗರಕ್ಕೆ ಬೆಂಗಳೂರು ದಕ್ಷಿಣ ಜಿಲ್ಲೆ ಎಂದು ಮರುನಾಮಕರಣ ಮಾಡಲು ರಾಜ್ಯ ಸರ್ಕಾರಕ್ಕೆ ಅಧಿಕಾರವಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಅವರು ಶುಕ್ರವಾರ ಮಾಧ್ಯಮದವರೊಂದಿಗೆ ಮಾತನಾಡಿದರು.

ರಾಮನಗರ ಜಿಲ್ಲೆಯನ್ನು ಬೆಂಗಳೂರು ದಕ್ಷಿಣ ಎಂದು ಮರುನಾಮಕರಣ ಮಾಡುವ ಮೂಲಕ ಜಿಲ್ಲೆಯ ಇತಿಹಾಸವನ್ನು ತಿರುಚಲಾಗುತ್ತಿದೆ ಎಂದು ಕೇಂದ್ರ ಸಚಿವ ಕುಮಾರಸ್ವಾಮಿಯವರು ಟೀಕೆ ಮಾಡಿರುವ ಬಗ್ಗೆ ಪ್ರತಿಕ್ರಿಯೆ ನೀಡಿ, ಅಲ್ಲಿನ ಜನರ ಜನಾಭಿಪ್ರಾಯವನ್ನು ಪಡೆದೇ ಈ ನಿರ್ಣಯವನ್ನು ಕೈಗೊಳ್ಳಲಾಗಿದೆ. ಕುಮಾರಸ್ವಾಮಿಯವರು ರಾಮನಗರ ಜಿಲ್ಲೆ ಸೃಜಿಸುವಾಗ, ಅಲ್ಲಿನ ಇತಿಹಾಸದ ಬಗ್ಗೆ ಯೋಚಿಸಿರಲಿಲ್ಲವೇ ಎಂದು ಮರುಪ್ರಶ್ನಿಸಿದರು.

**ಇ.ಡಿ ಹಾಗೂ ಐ.ಟಿ ದಾಳಿಗಳು**



**ರಾಜಕೀಯ ಪ್ರೇರಿತವಾಗಬಾರದು:** ಜಾರಿನಿರ್ದೇಶನಾಲಯ ತನ್ನ ಎಲ್ಲೆಯನ್ನು ಮೀರುತ್ತಿರುವ ಬಗ್ಗೆ ಸರ್ವೋಚ್ಛ ನ್ಯಾಯಾಲಯ ಗಮನಿಸಿರುವ ಕುರಿತು ಪತ್ರರ್ತರ ಪ್ರಶ್ನೆಗೆ ಉತ್ತರಿಸುತ್ತಾ, ಇ.ಡಿಯವರು, ಐ.ಟಿ.ಯವರು ತನಿಖೆ ಮಾಡುವುದನ್ನೇ ಆಗಲಿ ಅಥವಾ ಕಪ್ಪು ಹಣ ವ್ಯವಹಾರವನ್ನು ಪತ್ತೆ ಹಚ್ಚುವುದನ್ನೇ ಆಗಲಿ ಆಕ್ಷೇಪಿಸುವುದಿಲ್ಲ. ಆದರೆ ಇ.ಡಿ ಮತ್ತು ಐ.ಟಿ ದಾಳಿಗಳು ರಾಜಕೀಯ ದುರುದ್ದೇಶದಿಂದ ನಡೆಯಕೂಡದು. ಪ್ರಸ್ತುತ ಗೃಹ ಸಚಿವ ಜಿ.ಪರಮೇಶ್ವರ ಅವರ ಶಿಕ್ಷಣ ಸಂಸ್ಥೆಯ ಮೇಲೆ ಇ.ಡಿ.ದಾಳಿ ರಾಜಕೀಯ ಪ್ರೇರಿತ. ಸುಪ್ರೀಂ ಕೋರ್ಟ್ ನವರು ಯಾವ ಪ್ರಕರಣಕ್ಕೆ ಸಂಬಂಧಿಸಿದಂತೆ ಈ ರೀತಿ ಅವಲೋಕಿಸಿದ್ದಾರೆ ಎಂದು ತೀರ್ಪು ಪರಿಶೀಲಿಸಿದ ನಂತರವಷ್ಟೇ ತಿಳಿಯಲಿದೆ ಎಂದರು.

**ಒಂದು ವರ್ಷದಿಂದ ಅಪರಾಧ ಪ್ರಕರಣಗಳು ಕಡಿಮೆಯಿದೆ:** ರಾಜ್ಯದಲ್ಲಿ ಅತ್ಯಾಚಾರ ಪ್ರಕರಣಗಳು ಹೆಚ್ಚುತ್ತಿರುವ ಬಗ್ಗೆ ಮಾಧ್ಯಮದವರ ಪ್ರಶ್ನೆಗೆ ಪ್ರತಿಕ್ರಿಯೆ ನೀಡುತ್ತಾ, ಅಪರಾಧ ಪ್ರಕರಣಗಳ ವಿರುದ್ಧ ಕಠಿಣ ಕ್ರಮವಾಗುತ್ತದೆ. ಆದರೆ ಕಳೆದ ಒಂದು ವರ್ಷದಿಂದ ರಾಜ್ಯದಲ್ಲಿ ಅಪರಾಧಗಳ ಸಂಖ್ಯೆ ಕಡಿಮೆಯಾಗಿದ್ದು, ಬಿಜೆಪಿ ಅವಧಿಗೆ ಹೋಲಿಸಿದರೆ ನಮ್ಮ ಸರ್ಕಾರದ ಅವಧಿಯಲ್ಲಿ ಅಪರಾಧಗಳ ಸಂಖ್ಯೆ ಕಡಿಮೆಯಿದೆ. ಅಪರಾಧಗಳನ್ನು ಗಮನಾರ್ಹವಾಗಿ ಕಡಿಮೆ ಮಾಡಲು ಸರ್ಕಾರ ಖಂಡಿತ ಪ್ರಯತ್ನಿಸುತ್ತದೆ ಎಂದರು.

**ಕೇಂದ್ರ ಸರ್ಕಾರ ಕೋವಿಡ್ ಎಚ್ಚರಿಕಾ ಕ್ರಮ ತೆಗೆದುಕೊಳ್ಳಲಿ:** ಸಿಂಗಾಪುರ , ಹಾಂಕಾಂಗ್ ದೇಶದಲ್ಲಿ ಕೋವಿಡ್ ಪ್ರಕರಣ ಹೆಚ್ಚುತ್ತಿದ್ದು, ವಿದೇಶದಿಂದ ಆಗಮಿಸುವವರ ಕೋವಿಡ್ ಪರೀಕ್ಷೆ ನಡೆಸಲು ಕೇಂದ್ರ ಸರ್ಕಾರ ಯಾವುದೇ ಕ್ರಮ ವಹಿಸದೇ, ಇಲ್ಲಿಯೂ ಕೋವಿಡ್ ಪ್ರಕರಣಗಳು ಹೆಚ್ಚುವ ಸಾಧ್ಯತೆಯಿರುವ ಬಗ್ಗೆ ಪ್ರತಿಕ್ರಿಯೆ ನೀಡಿ, ಕೋವಿಡ್ ಪ್ರಕರಣಗಳಲ್ಲಿ ಏರಿಕೆ ಕಂಡುಬರುತ್ತಿದ್ದ ಸಂದರ್ಭದಲ್ಲಿ ಕೇಂದ್ರ ಸರ್ಕಾರ ಈ ಬಗ್ಗೆ ಎಚ್ಚರಿಕಾ ಕ್ರಮಗಳನ್ನು ತೆಗೆದುಕೊಳ್ಳಲು ತ್ವರಿತ ನಿರ್ಧಾರಗಳನ್ನು ತೆಗೆದುಕೊಳ್ಳಬೇಕು ಎಂದರು.

**ದೇಣಿಗೆ ನೀಡುವುದು ತಪ್ಪಲ್ಲ:** ಯಂಗ್ ಇಂಡಿಯಾ ಸಂಸ್ಥೆಗೆ ದೇಣಿಗೆ ನೀಡಿರುವ ಬಗ್ಗೆ ಡಿಸಿಎಂ ಹಾಗೂ ಮಾಜಿ ಸಂಸದ ಡಿ.ಕೆ.ಸುರೇಶ್ ರವರ ಮೇಲೆ ಚಾರ್ಜ್ ಶೀಟ್ ಸಲ್ಲಿಕೆಯಾಗಿರುವ ಬಗ್ಗೆ ಮಾತನಾಡಿ, ಯಾವುದೇ ಸಂಸ್ಥೆಗೆ ದೇಣಿಗೆ ನೀಡುವುದು ತಪ್ಪಲ್ಲ ಎಂದರು.

**ಫಾಸ್ಟ್ ನ್ಯೂಸ್**

## ಪ್ರತಿಯೊಬ್ಬರು ವಾರ್ಷಿಕ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳಿ-ಜನತೆಗೆ ಸಿಎಂ ಸಲಹೆ



» **ಮೈಸೂರು**

ಗುಣಮಟ್ಟದ ಆರೋಗ್ಯ ಸೇವೆಗಳು ರಾಜ್ಯದ ಎಲ್ಲ ಜಿಲ್ಲೆಗಳಿಗೂ ಒದಗಿಸುವುದು ಸರ್ಕಾರದ ಗುರಿ. ಮೈಸೂರು ಜಿಲ್ಲೆಗೆ ಎಂ.ಆರ್.ಐ. ಸೌಲಭ್ಯವನ್ನು ಒದಗಿಸಲು ತೀರ್ಮಾನಿಸಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಅವರು ಇಂದು ಜಿಲ್ಲಾ ಆಸ್ಪತ್ರೆ ಮೇಟಗಳ್ಳಿ ಯಲ್ಲಿ ಆಯೋಜಿಸಲಾಗಿದ್ದ ಡೇ ಕೇರ್ ಕಿಮೋಥೇರಪಿ ಕೇಂದ್ರ ವನ್ನು ವಿಡಿಯೋ ಸಂವಾದ ಮೂಲಕ ಉದ್ಘಾಟನೆ ಮಾಡಿ ನಂತರ ಕಾರ್ಯಕ್ರಮ ವನ್ನು ಉದ್ದೇಶಿಸಿ ಮಾತನಾಡಿದರು. ಈ ಮೊದಲು ಕೀಮೋಥೆರಪಿ ಚಿಕಿತ್ಸೆಗೆ ಬೆಂಗಳೂರಿಗೆ ತೆರಳಬೇಕಾಗಿತ್ತು. ಇದು ರೋಗಿಗಳ ಪಾಲಿಗೆ ಕಷ್ಟಸಾಧ್ಯವಾಗಿತ್ತು. ರಾಜ್ಯದಲ್ಲಿ ಪ್ರತಿವರ್ಷ ಹೊಸ ರೋಗಿಗಳು ಪತ್ತೆಯಾಗುತ್ತಿದ್ದಾರೆ. ಬಡ ಕ್ಯಾನ್ಸರ್ ರೋಗಿಗಳಿಗೆ ಚಿಕಿತ್ಸೆ ದೊರೆಯದ ಕಾರಣ, ಅಕಾಲಿಕ ಮರಣಕ್ಕೆ ತುತ್ತಾಗುತ್ತಿದ್ದರು. ಕ್ಯಾನ್ಸರ್ ರೋಗಕ್ಕೆ ತುತ್ತಾಗುವವರ ಸಂಖ್ಯೆಯಲ್ಲಿ ತಮಿಳುನಾಡಿನ ನಂತರದ ಸ್ಥಾನವನ್ನು ಕರ್ನಾಟಕ ಪಡೆದಿದೆ. ಈ ಕಾಯಿಲೆ ತಕ್ಷಣ ಪತ್ತೆಯಾದರೆ ಗುಣಪಡಿಸುವ ಸಾಧ್ಯತೆಯಿದ್ದು, ಪತ್ತೆಯಾಗದ ಸಂದರ್ಭದಲ್ಲಿ ಮಾರಣಾಂತಿಕವಾಗಿಯೂ ಪರಿಣಮಿಸಬಹುದು. ಆದರೆ ಆಧುನಿಕ ಔಷದೋಪಚಾರಗಳು ಲಭ್ಯವಿದ್ದರೂ, ದುಬಾರಿಯಾಗಿದೆ ಎಂದರು.

**ವೈದ್ಯಕೀಯ ಸೇವೆ ರಾಜ್ಯದ ಬಡವರಿಗೂ ದೊರೆಯಬೇಕು:** ಭಾರತದಲ್ಲಿ ಸುಮಾರು 100 ಕೋಟಿ ಜನರಿಗೆ ಬಡತನದಿಂದಾಗಿ ಚಿಕಿತ್ಸೆ ಪಡೆಯುವ ಶಕ್ತಿಯಿರುವುದಿಲ್ಲ. 2013 ರಲ್ಲಿ ರಾಜ್ಯದ ಬಡವರ ಸಂಕಷ್ಟಕ್ಕೆ ಸ್ಪಂದಿಸಲು ನಮ್ಮ ಸರ್ಕಾರ 5 ಕೆಜಿ ಅಕ್ಕಿಯನ್ನು ಉಚಿತವಾಗಿ ನೀಡುತ್ತಿದೆ. 2023ರಲ್ಲಿ ರಾಜ್ಯದ ಯಾವ ಬಡವರೂ ಹಸಿವಿನಿಂದ ಬಳಲಬಾರದು ಎಂಬ ಉದ್ದೇಶದಿಂದ 10 ಕೆಜಿ ಅಕ್ಕಿಯನ್ನು ಉಚಿತವಾಗಿ ಸರ್ಕಾರ ನೀಡುತ್ತಿದೆ. ಹಸಿವು ಮುಕ್ತ ರಾಜ್ಯ ನಿರ್ಮಿಸುವ ಜೊತೆಗೆ ಶಿಕ್ಷಣ, ವೈದ್ಯಕೀಯ ಸೇವೆ ರಾಜ್ಯದ ಪ್ರತಿಯೊಬ್ಬರಿಗೂ ದೊರೆಯಬೇಕೆಂಬುದು ಸರ್ಕಾರದ ಗುರಿ. ಡಾ.ಬಿ.ಆರ್.ಅಂಬೇಡ್ಕರ್ ರವರು ತಿಳಿಸಿದಂತೆ ಸಮಾಜದಲ್ಲಿ ಸಮಾನತೆ ನೆಲೆಸಬೇಕಾದರೆ ಜಾತಿ ವ್ಯವಸ್ಥೆ ತೊಲಗಬೇಕು ಮತ್ತು ಆರ್ಥಿಕ, ಸಾಮಾಜಿಕ ಸಮಾನತೆ ಸಾಧಿಸಬೇಕು ಎಂದರು. 2013ರಲ್ಲಿ ನಾನು ಮುಖ್ಯಮಂತ್ರಿಯಾದ ಸಂದರ್ಭದಲ್ಲಿ ಮೈಸೂರಿನಲ್ಲಿ ಜಿಲ್ಲಾ ಆಸ್ಪತ್ರೆ ಇರಲಿಲ್ಲ. ಈ ಪ್ರಮುಖ ಜಿಲ್ಲೆಯಲ್ಲಿ ಸಕಲ ವೈದ್ಯಕೀಯ ಸೌಲಭ್ಯಗಳನ್ನು ಒದಗಿಸಲು ಪ್ರಯತ್ನಿಸಿದೆ ಎಂದರು.

**ಸರ್ಕಾರಿ ಆಸ್ಪತ್ರೆಗಳಲ್ಲಿ ಹೆಚ್ಚು ಅನುಭವ ಮತ್ತು ಪರಿಣಿತಿಯುಳ್ಳ ವೈದ್ಯರಿದ್ದಾರೆ:** 240 ಕೇಂದ್ರಗಳಲ್ಲಿ ಡಯಾಲಿಸಿಸ್ ಕೇಂದ್ರಗಳಿವೆ. ಡಯಾಲಿಸಿಸ್ ಎನ್ನುವುದು ಈಗ ಸಾಮಾನ್ಯ ರೋಗ ಎಂಬಂತಾಗಿದೆ. ಇದಕ್ಕೆ ದುಬಾರಿ ಬೆಲೆಯಾಗಿರುವುದರಿಂದ ಖಾಸಗಿ ಆಸ್ಪತ್ರೆಗೆ ಬಡ ಜನರು ಹೋಗಲಾಗುವುದಿಲ್ಲ. ಮುಖ್ಯಮಂತ್ರಿಗಳ ಪರಿಹಾರ ನಿಧಿಯಿಂದ 5 ಲಕ್ಷಗಳಷ್ಟು ಕೊಟ್ಟರೂ ಸಂಪೂರ್ಣ ಚಿಕಿತ್ಸೆಗೆ ಅದು ಸಾಲುವುದಿಲ್ಲ. ಇತ್ತೀಚೆಗೆ ಜನರಲ್ಲಿ ಖಾಸಗಿ ಆಸ್ಪತ್ರೆಗಳಿಗೆ ಹೋದರೆ ಮಾತ್ರ ಖಾಯಿಲೆ ವಾಸಿಯಾಗುತ್ತದೆ ಎಂಬ ಭಾವನೆ ಇದೆ. ಆದರೆ ಸರ್ಕಾರಿ ಆಸ್ಪತ್ರೆಗಳಲ್ಲಿ ಹೆಚ್ಚು ಅನುಭವ ಮತ್ತು ಪರಿಣಿತಿ ಇರುವ ವೈದ್ಯರಿದ್ದಾರೆ ಎಂದರು. ಜನರು ಸರ್ಕಾರಿ ಆಸ್ಪತ್ರೆಗಳಲ್ಲಿಯೂ ಖಾಯಿಲೆ ವಾಸಿಯಾಗುತ್ತದೆ ಎಂದು ಅರಿಯಬೇಕು. ಜಯದೇವ ಆಸ್ಪತ್ರೆಗಳಲ್ಲಿ ನೀಡುವ ಚಿಕಿತ್ಸೆ ಯಾವ ಖಾಸಗಿ ಆಸ್ಪತ್ರೆಗೂ ಕಡಿಮೆಯಿಲ್ಲ ಎಂದರು.

**ಸರ್ಕಾರಿ ಆಸ್ಪತ್ರೆಗಳಲ್ಲಿ ಸ್ವಚ್ಛತೆಯನ್ನು ಕಾಪಾಡಬೇಕು:** ಸರ್ಕಾರಿ ಆಸ್ಪತ್ರೆಗಳಲ್ಲಿ ಸ್ವಚ್ಛತೆಯನ್ನು ಕಾಪಾಡಬೇಕು. ಅದು ಇದ್ದರೆ ರೋಗ ಹರಡುವುದು ಕಡಿಮೆಯಾಗುತ್ತದೆ. ಸಂಸ್ಥೆಯ ಮುಖ್ಯಸ್ಥರು ಒಳ್ಳೆಯವರಿದ್ದರೆ ಒಳ್ಳೆ ಕೆಲಸಗಳಾಗುತ್ತದೆ. ಸರ್ಕಾರ ಶಿಕ್ಷಣ, ಆರೋಗ್ಯ, ಅಭಿವೃದ್ಧಿ ಕಾಮಾಗಾರಿಗಳು, ಜನರಿಗೆ ಆರ್ಥಿಕ ಶಕ್ತಿ ತುಂಬುವ ಕೆಲಸಗಳಿಗೆ ಅನುದಾನ ನೀಡುತ್ತದೆ. ಪಂಚ ಗ್ಯಾರಂಟಿಗಳು ನೇರವಾಗಿ ಫಲಾನುಭವಿಗಳಿಗೆ ತಲಪುತ್ತಿದೆ. ಇದು ಎಲ್ಲಾ ಧರ್ಮ, ಜಾತಿ, ಪಕ್ಷಗಳಿಗೂ ಮುಕ್ತವಾಗಿದೆ ಎಂದರು. ರೋಗ ನ್ನುವುದು ಜಾತಿ, ಧರ್ಮ ನೋಡಿಕೊಂಡು ಬರುವುದಿಲ್ಲ. ಸಮಾಜದ ಬಡವರಿಗೆ ಹೆಚ್ಚು ಒತ್ತು ಕೊಟ್ಟು ಕೆಲಸ ಮಾಡುವುದು ಅಗತ್ಯ ಎಂದರು.

**ಕೀಮೋಥೆರಪಿ ಕೇಂದ್ರಗಳ ಸದುಪಯೋಗವಾಗಬೇಕು:** ನಿಮ್ಹಾನ್ಸ್ ಕೇಂದ್ರ ಮೈಸೂರು ನಗರದಲ್ಲಿ ಆಗಬೇಕೆಂಬ ಕಾರಣದಿಂದ ಬಾರಿಯ ಬಜೆಟ್ ನಲ್ಲಿ ಅನುದಾನವನ್ನು ಮೀಸಲಿರಿಸಲಾಗಿದೆ. ಶೇ 60% ರೋಗಿಗಳು ಚಿಕಿತ್ಸೆಗಾಗಿ ನೂರು ಕಿಮೀ ವರೆಗೆ ಪ್ರಯಾಣ ಮಾಡಬೇಕಾದ ಸ್ಥಿತಿ ಇದೆ. ಅದಕ್ಕಾಗಿ ನಾವು ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಕೀಮೋಥೆರಪಿ ಸೌಲಭ್ಯವನ್ನು ಒದಗಿಸುತ್ತಿದ್ದೇವೆ. ಇದರ ಲಾಭವನ್ನು ಮೂತ್ರಪಿಂಡ ಖಾಯಿಲೆಗೆ ತುತ್ತಾದವರು ಪಡೆದುಕೊಳ್ಳಬೇಕು ಎಂದರು.

# ಕಥೆ ಹೇಳುವೆ, ಕೇಳಿ....

## ನಮ್ಮ ಮಕ್ಕಳಿಗಾಗಿ ಎರಡು ನೀತಿ ಕಥೆಗಳು.......







ಭಾವನಾತ್ಮಕ ದೃಶ್ಯದ ತುಣುಕೊಂದು ಸೋಷಿಯಲ್ ಮೀಡಿಯಾದಲ್ಲಿ ಹ ರಿ ದಾ ಡ ುತ್ತಿ ದೆ. ಅದರ ಒಳ ಅರ್ಥ ಮಾತ್ರ ವಿಶಾಲವಾಗಿದೆ ಮತ್ತು ತಂದೆ ತಾಯಿ ಅಜ್ಜ ಅಜ್ಜಿ ಮೊದಲಾದ ಹಿರಿಯರನ್ನು ನಿರ್ಲಕ್ಷಿಸುವವರ ಆತ್ಮಕ್ಕೆ ನೇರವಾಗಿ ಚುಚ್ಚುತ್ತದೆ.......

ನೀವು ಈಗಾಗಲೇ ಇದನ್ನು ನೋಡಿರಬಹುದು ಅಥವಾ ಕೇಳಿರಬಹುದು. ಅದನ್ನು ಮತ್ತೊಮ್ಮೆ ನೆನಪಿಸುತ್ತಾ............

ಒಂದು ಪಾರ್ಕಿನ ಬೆಂಚಿನ ಮೇಲೆ ಎಳೆ ಬಿಸಿಲಿನ ಬೆಳಗಿನ ಸಮಯದಲ್ಲಿ 75/85 ರ ವಯಸ್ಸಿನ ವೃದ್ದರೊಬ್ಬರು ಕುಳಿತಿದ್ದಾರೆ. ಅವರ ಪಕ್ಕದಲ್ಲೇ ಅವರ ಸುಮಾರು 25 ವರ್ಷದ ಮಗ ಪತ್ರಿಕೆ ಓದುತ್ತಾ ಕುಳಿತಿದ್ದಾನೆ......

ಆ ಪಾರ್ಕಿನ ನಿಶ್ಯಬ್ಧ ವಾತಾವರಣದಲ್ಲಿ ಒಂದು ಮರದಿಂದ ಯಾವುದೋ ಪಕ್ಷಿಯ ವಿಚಿತ್ರ ಧ್ವನಿ ಕೇಳಿ ಬರುತ್ತದೆ. ಆ ತಂದೆಗೆ ಕುತೂಹಲ ಉಂಟಾಗುತ್ತದೆ. ಪತ್ರಿಕೆ ಓದುತ್ತಿದ್ದ ಮಗನನ್ನು " ಕಂದ, ಆ ಧ್ವನಿ ಕೇಳುತ್ತಿದೆಯಲ್ಲ ಅದು ಯಾವ ಹಕ್ಕಿಯ ಧ್ವನಿ ನಿನಗೆ ಗೊತ್ತೆ " ಎಂದು ಕೇಳುತ್ತಾರೆ......

ಓದುವುದರಲ್ಲಿ ಮಗ್ನನಾಗಿದ್ದ ಮಗ ನಿರ್ಲಕ್ಷ್ಯದಿಂದ " ಗೊತ್ತಿಲ್ಲ " ಎಂದು ಉತ್ತರಿಸಿ ಸುಮ್ಮನಾಗುತ್ತಾನೆ......

ಆ ಪಕ್ಷಿಯ ಧ್ವನಿ ಮತ್ತೆ ಮತ್ತೆ ಕೇಳಿಬರುತ್ತದೆ. ಆ ಹಿರಿಯರಿಗೆ ಮತ್ತಷ್ಟು ಕುತೂಹಲ ಹೆಚ್ಚಾಗುತ್ತದೆ. ಯೋಚಿಸಿದಷ್ಟು ಯಾವ ಪಕ್ಷಿ ಎಂಬ ಗೊಂದಲ ಉಂಟಾಗುತ್ತದೆ......

ಮತ್ತೊಮ್ಮೆ ಮಗನನ್ನು " ಪುಟ್ಟ ಸರಿಯಾಗಿ ಕೇಳು. ಇದರ ಧ್ವನಿ ನಾನು ಬಹಳ ಕೇಳಿದ್ದೇನೆ. ಆದರೆ ಪಕ್ಷಿಯ ಹೆಸರು ನೆನಪಾಗುತ್ತಿಲ್ಲ. ನಿನಗೆ ತಿಳಿದಿರಬಹುದು " ಎನ್ನುತ್ತಾರೆ.......

ಪತ್ರಿಕೆ ಓದುತ್ತಿದ್ದ ಮಗನಿಗೆ ಸ್ವಲ್ಪ ಅಸಹನೆ ಉಂಟಾಗುತ್ತದೆ. " ಆಗಲೇ ಹೇಳಿದೆನಲ್ಲಾ ನನಗೆ ಅದೆಲ್ಲಾ ಗೊತ್ತಿಲ್ಲ " ಎಂದು ಧ್ವನಿ ಏರಿಸಿ ಉತ್ತರಿಸುತ್ತಾನೆ.....

ಹಿರಿಯರು ಸುಮ್ಮನಾಗುತ್ತಾರೆ. ಸ್ವಲ್ಪ ಹೊತ್ತಿಗೆ ಆ ಪಕ್ಷಿಯ ಧ್ವನಿ ಇನ್ನೂ ಹತ್ತಿರವಾಗುತ್ತದೆ ಮತ್ತೂ ಜೋರಾಗಿ ಕೇಳಿಸುತ್ತದೆ. ವೃದ್ದರಿಗೆ ಆ ಧ್ವನಿ ಮಾಡುತ್ತಿರುವ ಹಕ್ಕಿಯ ಹೆಸರು ನೆನಪಾಗುತ್ತಿಲ್ಲ. ಆದರೆ ಅದನ್ನು ಬಹಳ ಹಿಂದೆ ಕೇಳಿದ ನೆನಪು ಮಾತ್ರ ಸ್ಮೃತಿಪಟಲದಲ್ಲಿ ಅಚ್ಚೊತ್ತಿದಂತಿದೆ.....

ಮನಸ್ಸು ತಡೆಯದೆ ವಿಲ ವಿಲ ಒದ್ದಾಡುತ್ತದೆ. ಮತ್ತೆ ಮಗನನ್ನು "ಮಗನೇ ದಯವಿಟ್ಟು ಇನ್ನೊಮ್ಮೆ ಆ ಧ್ವನಿ ಕೇಳು. ನಿನಗೆ ನೆನಪಾಗಬಹುದು. ಆ ಧ್ವನಿ ನನಗೆ ಬಾಲ್ಯದ ದಿನಗಳನ್ನು ಜ್ಞಾಪಿಸುತ್ತಿದೆ. ಹಕ್ಕಿಯ ಹೆಸರು ಗೊತ್ತಾದರೆ ತುಂಬಾ ಖುಷಿಯಾಗುತ್ತದೆ."......

ಪದೇ ಪದೇ ತನ್ನ ಪತ್ರಿಕೆಯ ಓದಿಗೆ ಅಡ್ಡಿಪಡಿಸುತ್ತಿದ್ದ ತಂದೆಯ ಬಗ್ಗೆ ಅವನ ಅಸಹನೆ ಮೇರೆ ಮೀರುತ್ತದೆ.

" ಅಪ್ಪಾ ಆಗಲೇ ಹೇಳಿದೆನಲ್ಲ. ನನಗೆ ಗೊತ್ತಿಲ್ಲ ಅಂತ. ಎಷ್ಟು ಸಾರಿ ಹೇಳುವುದು. ಯಾಕೆ ಸುಮ್ಮನೆ ತಲೆ ತಿನ್ನುವೆ. ಅದಕ್ಕೆ ನನಗೆ ನಿನ್ನ ಜೊತೆ ಬರಲು ಇಷ್ಟವಾಗುವುದಿಲ್ಲ " ಎಂದು ಕೋಪದಿಂದ ಹೇಳಿ ಪತ್ರಿಕೆ ಮುದುಡಿ ಇನ್ನೊಂದು ಬೆಂಚಿನ ಮೇಲೆ ಹೋಗಿ ಕುಳಿತುಕೊಳ್ಳುತ್ತಾನೆ.....

ಆ ವೃದ್ದರಿಗೆ ಬೇಸರವಾದರೂ ಅದನ್ನು ತೋರಿಸಿಕೊಳ್ಳದೆ ಸ್ವಲ್ಪ ಸಮಯದ ನಂತರ ಮಗ ಕುಳಿತಿದ್ದ ಬೆಂಚಿನ ಬಳಿ ಹೋಗಿ

" ಚಿನ್ನ ಕ್ಷಮಿಸು ನನ್ನದು ತಪ್ಪಾಯಿತು. ನಿನಗೆ ಬೇಸರ ಮಾಡಿದ್ದಕ್ಕೆ. ಏನೋ ಮನಸ್ಸು ತಡೆಯಲಿಲ್ಲ " ಎಂದು ಹೇಳಿ ಪಕ್ಕದಲ್ಲಿ ಕುಳಿತು ಅವನ ಮೈದಡವುತ್ತಾ......

" ಬಂಗಾರ ಆಗಿನ್ನೂ ನಿನಗೆ 5 ವರ್ಷ. ನಿನ್ನ ಅಮ್ಮನಿಗೆ ಖಾಯಿಲೆಯಾಗಿತ್ತು. ನೀನು ಅಮ್ಮನ ಬಳಿ ಹೋಗುವಂತಿರಲಿಲ್ಲ. ತುಂಬಾ ಹಠ ಮಾಡಿ ಅಳುತ್ತಿದ್ದೆ. ಆಗ ನಿನ್ನನ್ನು ಹೊರಗೆ ತಿರುಗಾಡಲು ಭುಜದ ಮೇಲೆ ಹೊತ್ತು ಸಾಗುತ್ತಿದ್ದೆ. ನೀನು ದಾರಿಯಲ್ಲಿ ಕಾಣುತ್ತಿದ್ದ ಪ್ರತಿ ವಸ್ತುಗಳನ್ನು ಪ್ರಾಣಿ ಪಕ್ಷಿಗಳನ್ನು ಇದು ಏನು ಇದು ಏನು ಎಂದು ಮತ್ತೆ ಮತ್ತೆ ನೂರಾರು ಬಾರಿ ಕೇಳುತ್ತಿದ್ದೆ. ನೀನು ಪ್ರತಿ ಬಾರಿ ಕೇಳಿದಾಗಲೂ ನಾನು ಸಂತೋಷದಿಂದಲೇ ನಗುನಗುತ್ತಾ ಮತ್ತೆ ಮತ್ತೆ ಹೇಳುತ್ತಿದ್ದೆ. ಇದು ಕೇವಲ ಒಂದು ದಿನದ ಘಟನೆಯಲ್ಲ. ನೀನು ಕಾಲೇಜಿಗೆ ಸೇರುವವರೆಗೂ ನಾನು ನಿನ್ನ ಎಲ್ಲಾ ಪ್ರಶ್ನೆಗಳಿಗೂ ನಗುನಗುತ್ತಾಲೇ ಉತ್ತರಿಸುತ್ತಿದ್ದೆ ಮತ್ತು ನೀನು ಈಗಲೂ ಕೇಳಿದರೂ ಸಹ..........." ಎಂದು ಆಕಾಶದ ಕಡೆ ದೃಷ್ಟಿ ನೆಡುತ್ತಾರೆ..........

ಈ ದೃಶ್ಯದ ತುಣುಕಿನಲ್ಲಿ ಮಗನಿಗೆ ತನ್ನ ತಪ್ಪಿನ ಅರಿವಾಗುತ್ತದೆ. ಆತ ತಂದೆಯನ್ನು ತಬ್ಬಿಕೊಂಡು ಕ್ಷಮೆ ಕೇಳುತ್ತಾನೆ ಮತ್ತು ತನ್ನ ವರ್ತನೆ ಬದಲಾಯಿಸಿಕೊಳ್ಳುತ್ತಾನೆ.......

ಇದನ್ನು ಓದಿದ ( ನನ್ನನ್ನೂ ಸೇರಿ ) ನಾವುಗಳು ಸಹ ಕನಿಷ್ಠ ಪಕ್ಷ ಒಂದಷ್ಟು ಪ್ರಮಾಣದ ತಾಳ್ಮೆ ಮತ್ತು ಪ್ರೀತಿಯನ್ನು ನಮ್ಮ ಹಿರಿಯರ ಬಗ್ಗೆ ತೋರಿಸೋಣ. ಈ ಕಥೆಯ ಸಾರಾಂಶವನ್ನು ಪ್ರಾಯೋಗಿಕವಾಗಿ ಅನುಸರಿಸಲು ಪ್ರಯತ್ನಿಸೋಣ.....

( ಕೆಲವು ತಂದೆ ತಾಯಿ ಮತ್ತು ಹಿರಿಯರು ಸಹ ತಮ್ಮ ಮಕ್ಕಳಿಗೆ ಅವರ ಸ್ವಾತಂತ್ರ್ಯ ಅನುಭವಿಸಲು ಬಿಡದೆ, ಅವರ ಪರಿಸ್ಥಿತಿ ಅರ್ಥಮಾಡಿಕೊಳ್ಳದೆ, ಅವರ ಮೇಲೆ ಸಂಪೂರ್ಣ ನಿಯಂತ್ರಣ ಹೊಂದಿರುವ ಸರ್ವಾಧಿಕಾರಿಗಳಂತೆ ವರ್ತಿಸುವ ಘಟನೆಗಳು ಸಹ ಇವೆ. ಅದೂ ಸಹ ಸ್ವಲ್ಪ ಕಿರಿ ಕಿರಿ ಮಾಡುತ್ತದೆ. ಅದನ್ನೂ ಸಹ ನೆನಪಿಸುತ್ತಾ.......)

**********

### ಇನ್ನೊಂದು ಜಾನಪದ ಕಥೆ.......

*******

ಒಮ್ಮೆ ಕಾಡಿನ ತೋಳವೊಂದು ಆಹಾರ ಹುಡುಕುತ್ತಾ ರಾತ್ರಿಯಲ್ಲಿ ಕಾಡಂಚಿನ ಹಳ್ಳಿ ಮನೆಯ ಕುರಿ - ದನದ ಕೊಟ್ಟಿಗೆಗೆ ನುಗ್ಗುತ್ತದೆ. ಆ ಕತ್ತಲೆಯಲ್ಲಿ ಅದು ನುಗ್ಗಿದ ರಭಸಕ್ಕೆ ಆ ಮನೆಯವರು ಮನೆಗೆ ಹೊಡೆಯಲು ಇಟ್ಟಿದ್ದ ವಿವಿಧ ಸುಣ್ಣದ - ಬಣ್ಣದ ಡಬ್ಬಗಳಲ್ಲಿ ಬೀಳುತ್ತದೆ. ಅದರ ದೇಹವೆಲ್ಲಾ ಬಣ್ಣಗಳಿಂದ ತೋಯ್ದು ಹೋಗುತ್ತದೆ. ಗಾಬರಿಯಾದ ತೋಳ ಎದ್ದೆನೋ ಬಿದ್ದೆನೋ ಎಂದು ಅಲ್ಲಿಂದ ಎಗರಿ ಕಾಡಿನತ್ತ ಓಡುತ್ತದೆ.

ಅಲ್ಲಿ ಇಲ್ಲಿ ಅಲೆದು ಬೆಳಗಿನ ಹೊತ್ತಿಗೆ ದಟ್ಟ ಕಾಡಿಗೆ ಹೊಕ್ಕು ಒಂದು ಮರದ ಕೆಳಗೆ ಕುಳಿತು ವಿಶ್ರಾಂತಿ ಪಡೆಯುತ್ತಿರುತ್ತದೆ.

ಆಶ್ಚರ್ಯ, ಕಾಡಿನ ಕೆಲವು ಪ್ರಾಣಿಗಳು ಅದರಲ್ಲೂ ತೋಳಕ್ಕಿಂತ ಬಲಿಷ್ಠವಾಗಿರುವವು ಸಹ ಇದನ್ನು ನೋಡಿ ಭಯ ಮತ್ತು ಗೌರವದಿಂದ ನಮಸ್ಕಾರ ಮಾಡುತ್ತವೆ.

ತೋಳಕ್ಕೆ ಆಶ್ಚರ್ಯ ಮತ್ತು ಕುತೂಹಲ ಮೂಡುತ್ತದೆ. ಅರೆ ನನಗೇಕೆ ಈ ಪ್ರಾಣಿಗಳು ನಮಸ್ಕಾರ ಮಾಡುತ್ತಿವೆ. ನಾನು ಕಾಡಿನ ರಾಜನಲ್ಲ. ಸಿಂಹ ಕಾಡಿನ ರಾಜ. ನಾನೊಂದು ಸಣ್ಣ ಪ್ರಾಣಿ. ನನಗೇಕೆ ಮರ್ಯಾದೆ ಎಂದು ಯೋಚಿಸುತ್ತದೆ.

ಸ್ವಲ್ಪ ಸಮಯವಾದ ಮೇಲೆ ಬಿಸಿಲು ಹೆಚ್ಚಾಗುತ್ತದೆ. ತೋಳಕ್ಕೆ ಬಾಯಾರಿಕೆಯಾಗಿ ನೀರು ಕುಡಿಯಲು ಕೆರೆಯ ಬಳಿ ಹೋಗಿ ಬಾಯಿ ಹಾಕುತ್ತದೆ. ಒಂದು ಕ್ಷಣ ಗಾಬರಿಯಾಗುತ್ತದೆ. ನೀರಿನಲ್ಲಿ ತನ್ನ ಪ್ರತಿಬಿಂಬ ಕಂಡು ಅದಕ್ಕೆ ವಿಚಿತ್ರವೆನಿಸುತ್ತದೆ. ಇಡೀ ದೇಹ ವಿವಿಧ ಬಣ್ಣಗಳಿಂದ ಕೂಡಿ ವಿಚಿತ್ರ ರೀತಿಯಲ್ಲಿ ಕಾಣುತ್ತದೆ. ಕೆಲವೇ ಕ್ಷಣಗಳಲ್ಲಿ ಅದಕ್ಕೆ ಇತರ ಪ್ರಾಣಿಗಳು ತನಗೆ ನೀಡುತ್ತಿರುವ ಗೌರವಕ್ಕೆ ಕಾರಣ ತಿಳಿಯುತ್ತದೆ.

ಅಲ್ಲಿಂದ ಅದರ ವರ್ತನೆಯೇ ಬದಲಾಗುತ್ತದೆ. ಅಹಂ ಬೆಳೆಯುತ್ತದೆ. ನಾನು ಬಲಿಷ್ಠ ಎಂಬ ಭ್ರಮೆ ಬೆಳೆಸಿಕೊಳ್ಳುತ್ತದೆ.

ಓಹೋ ನಾನೇ ಕಾಡಿನ ರಾಜನಾಗಲು ಅರ್ಹ. ಇನ್ನು ಮೇಲೆ ನಾನೇ ಕಾಡಿನ ಅಧಿಪತಿ ಎಂದು ಭಾವಿಸಿ ಎಲ್ಲಾ ಪ್ರಾಣಿಗಳಿಗೂ ಸಂದೇಶ ರವಾನಿಸುತ್ತದೆ. ಕಾಡಿನ ರಾಜ ಸಿಂಹ ಸೇರಿ ಎಲ್ಲರೂ ಒಪ್ಪಿ ಈ ಬಣ್ಣ ಬಣ್ಣದ ವಿಚಿತ್ರ ಪ್ರಾಣಿಯನ್ನು ರಾಜನಾಗಿ ಒಪ್ಪುತ್ತವೆ. ಅವುಗಳು ಇದು ತೋಳ ಎಂದು ಗುರುತಿಸಲು ವಿಫಲವಾಗುತ್ತವೆ.

ತೋಳ ಸಹ ರಾಜನಂತೆಯೇ ವರ್ತಿಸುತ್ತಾ ಇತರ ಪ್ರಾಣಿಗಳ ಮೇಲೆ ದೌರ್ಜನ್ಯ ನಡೆಸುತ್ತಾ ಇಡೀ ಕಾಡನ್ನು ಆಳುತ್ತಿರುತ್ತದೆ.


ಅದರ ಅಹಂಕಾರ ಎಲ್ಲೆ ಮೀರಿರುತ್ತದೆ. ರಾಜನಾಗುವ ಸಾಮರ್ಥ್ಯ ಇಲ್ಲದಿದ್ದರೂ ಆಕಸ್ಮಿಕವಾಗಿ ಅದೃಷ್ಟದ ಬಲದಿಂದ ಆ ಸ್ಥಾನ ಸಿಕ್ಕಿರುತ್ತದೆ.

ಹೀಗಿರುವಾಗ ಒಮ್ಮೆ ಕಾಡಿನಲ್ಲಿ ಈ ಬಣ್ಣದ ತೋಳದ ನೇತೃತ್ವದಲ್ಲಿ ಸಭೆ ನಡೆಯುತ್ತಿರುತ್ತದೆ. ಆಗ ಆಕಾಶದಲ್ಲಿ ಮೋಡಗಳು ಸೇರಿ ಮಳೆ ಬರಲಾರಂಭಿಸುತ್ತದೆ. ಆ ಮಳೆಯ ನೀರಿನ ಕಾರಣಕ್ಕೆ ತೋಳದ ಆ ಕೃತಕ ಬಣ್ಣ ತೊಯ್ದು ಅದರ ನಿಜ ಬಣ್ಣ ಬಯಲಾಗುತ್ತದೆ. ಇದನ್ನು ಗಮನಿಸಿದ ಇತರ ಪ್ರಾಣಿಗಳು ಓ ಹೋ ಇದು ವಿಶೇಷ ಶಕ್ತಿಯ ವಿಶೇಷ ಪ್ರಾಣಿಯಲ್ಲ, ಇದು ಒಂದು ಸಾಮಾನ್ಯ ತೋಳ ಎಂದು ಅರ್ಥಮಾಡಿಕೊಂಡು ಅದನ್ನು ಅಲ್ಲಿಂದ ಓಡಿಸುತ್ತವೆ........

ತೋಳದ ನಿಜ ಬಣ್ಣ ಒಂದು ದಿನ ಬಯಲಾಗುತ್ತದೆ........

ಸಾಧ್ಯವಾದರೆ ಇವುಗಳನ್ನು ಮಕ್ಕಳಿಗೆ ಓದಿ ಹೇಳಿ ಅಥವಾ ಓದಲು ಹೇಳಿ........

ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ,
ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ
ಮನಗಳಲ್ಲಿ, ಮನೆಗಳಲ್ಲಿ, ಮತಗಳಲ್ಲಿ, ಪರಿವರ್ತನೆಗಾಗಿ,
ಮನಸ್ಸುಗಳ ಅಂತರಂಗದ ಚಳವಳಿ,



» **ಲೇಖನ**
**ವಿವೇಕಾನಂದ. ಹೆಚ್.ಕೆ.**
**9844013068**

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T